
BV
ಕನ್ನಡ ದಿನಪತ್ರಿಕೆ
23 ಫೆಬ್ರುವರಿ । ಶುಕ್ರವಾರ
23 February 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 06 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಬಿಜೆಪಿಗೆ ಗುಡ್ ಬೈ ಹೇಳಿ ಕೈ ಹಿಡಿಯಲಿದ್ದಾರೆ ಮಾಜಿ ಸಂಸದ ಮುದ್ದ ಹನುಮೇಗೌಡ




ತುಮಕೂರು: ಲೋಕಸಭಾ ಚುನಾವಣೆ ಸಮೀಪಿಸುತ್ತಿದ್ದಂತೆಯೇ ರಾಜ್ಯದಲ್ಲಿ ರಾಜಕೀಯ ಚಟುವಟಿ–ಕೆಗಳು ಗರಿಗೆದರಿವೆ. ಮಾಜಿ ಸಂಸದ ಮುದ್ದಹನುಮೇಗೌಡ ಬಿಜೆಪಿಗೆ ಗುಡ್ ಬೈ ಹೇಳಿ ಕೈ ಹಿಡಿಯಲಿದ್ದಾರೆ.

ಗುರುವಾರ ಸಂಜೆ 4 ಗಂಟೆಗೆ ಕೆಪಿಸಿಸಿ ಕಚೇರಿಯಲ್ಲಿ ಕಾಂಗ್ರೆಸ್‌ಗೆ ಸೇರ್ಪಡೆಯಾಗಲಿದ್ದಾರೆ. ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಹಾಗೂ ಸಚಿವರಾದ ಜಿ.ಪರಮೇಶ್ವರ್, ಕೆ ಎನ್ ರಾಜಣ್ಣ ಸಮ್ಮುಖದಲ್ಲಿ ಸೇರ್ಪಡೆಗೆ ಸಿದ್ದತೆ ನಡೆಸಲಾಗುತ್ತಿದೆ.

ಕಳೆದ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಟಿಕೆಟ್ ಕೈ ತಪ್ಪಿದ್ದರಿಂದ ಮುದ್ದಹನುಮೇಗೌಡ ಅವರು ಬಿಜೆಪಿ ಸೇರಿದ್ದರು. ಆದರೆ ಬಿಜೆಪಿಯಲ್ಲೂ ವಿಧಾನಸಭಾ ಟಿಕೆಟ್ ವಂಚಿತರಾಗಿದ್ದರು. ಈ ಹಿನ್ನೆಲೆಯಲ್ಲಿ ಇದೀಗ ಮತ್ತೆ ತಮ್ಮ ಮಾತೃಪಕ್ಷದತ್ತ ಮುಖ ಮಾಡಿದ್ದಾರೆ.

## ಪ್ಯಾಂಟ್ ಒಳಗೆ ಬರೋಬ್ಬರಿ 22 ಲಕ್ಷ ಮೌಲ್ಯದ ಚಿನ್ನ ಸಾಗಾಣಿಕೆ; ವ್ಯಕ್ತಿ ಅಂದರ್



ಬೆಂಗಳೂರು: ಪ್ಯಾಂಟ್ ಒಳಗಡೆ ಚಿನ್ನವನ್ನು ಅಡಗಿಸಿ ಅಕ್ರಮವಾಗಿ ಸಾಗಾಟ ಮಾಡಲು ಯತ್ನಿಸಿದ ವ್ಯಕ್ತಿಯನ್ನು ಏರ್ಪೋರ್ಟ್ ಕಸ್ಟಮ್ಸ್ ಅಧಿಕಾರಿಗಳ ಬಂಧಿಸಿದ್ದಾರೆ. ಪ್ರಯಾಣಿಕನ ಕೈಯಿಂದ ಸುಮಾರು 22.5 ಲಕ್ಷ ಮೌಲ್ಯದ 367 ಗ್ರಾಂ ಚಿನ್ನವನ್ನು ವಶಪಡಿಸಿಕೊಂಡಿದ್ದಾರೆ.


ಶಾರ್ಜಾದಿಂದ ಬೆಂಗಳೂರಿಗೆ ಬಂದಿದ್ದ ಪ್ರಯಾಣಿಕನು ಕೆಂಪೇಗೌಡ ಏರ್ಪೋರ್ಟ್ ನಲ್ಲಿ ಕಸ್ಟಮ್ಸ್ ಅಧಿಕಾರಿಗಳ ಕೈಯಲ್ಲಿ ಲಾಕ್ ಆಗಿದ್ದಾನೆ. ಕಸ್ಟಮ್ಸ್ ಅಧಿಕಾರಿಗಳ ಕಣ್ತಪ್ಪಿಸಲು ವ್ಯಕ್ತಿ ಡಿಸೈನ್ ಪ್ಯಾಂಟ್ ಧರಿಸಿದ್ದನು. ಪ್ಯಾಂಟ್ ಒಳಗಡೆ ಹಲವು ಲೇಯರ್ಗಳನ್ನ ಮಾಡಿ ಅದರಲ್ಲಿ ಚಿನ್ನ ಅಡಗಿಸಿಟ್ಟಿದ್ದನು.

ವ್ಯಕ್ತಿಯೊರ್ವ ಪ್ಯಾಂಟ್ ಒಳಗಡೆ ಚಿನ್ನ ಅಡಗಿಸಿ ಅಕ್ರಮವಾಗಿ ಸಾಗಾಟ ಮಾಡುವಾಗ ರೆಡ್ ಹ್ಯಾಂಡಾಗಿ ಸಿಕ್ಕಿಬಿದ್ದಿದಾನೆ. ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಬಂದಿಳಿಯುತ್ತಿದ್ದಂತೆ ಕಸ್ಟಮ್ಸ್ ಅಧಿಕಾರಿಗಳ ಕಾರ್ಯಾಚರಣೆ ಮಾಡಿ ಚಿನ್ನವನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಪೌಡರ್ ರೂಪದ ಚಿನ್ನವನ್ನ ಅಡಗಿಸಿ ಸಾಗಾಟ ಮಾಡಲು ಯತ್ನಿಸಿದ ವೇಳೆ ಆರೋಪಿಯನ್ನು ವಶಕ್ಕೆ ಪಡೆಯಲಾಗಿದೆ. ಪ್ಯಾಂಟ್ ಕಟ್ ಮಾಡಿ ಚಿನ್ನದ ಪೌಡರ್ ಅನ್ನು ಕಸ್ಟಮ್ಸ್ ಅಧಿಕಾರಿಗಳು ಪಡೆದಿದ್ದಾರೆ. ದೇವನಹಳ್ಳಿ ಬಳಿಯ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಈ ಘಟನೆ ನಡೆದಿದೆ.

## ಭಾರತದ ವಿದ್ಯಾರ್ಥಿನಿಯ ಹತ್ಯೆ: ಪ್ರಕರಣಕ್ಕೆ ರೋಚಕ ತಿರುವು

### 23 ವರ್ಷದ ಜಾನ್ವಿ ಕಂದುಲಾ ಅಮೆರಿಕದಲ್ಲಿ ಸಾವು



ಬೆಂಗಳೂರು; ಭಾರೀ ಸಂಚಲನ ಮೂಡಿಸಿದ್ದ ಜಾನ್ವಿ ಕಂದುಲಾ ಸಾವು ಪ್ರಕರಣವು ಇದೀಗ ಹೊಸ ತಿರುವು ಪಡೆದುಕೊಂಡಿದೆ. ಸಾಕ್ಷ್ಯಾಧಾರದ ಕೊರತೆ ಹಿನ್ನೆಲೆಯಲ್ಲಿ ಪೊಲೀಸ್ ಅಧಿಕಾರಿ ವಿರುದ್ಧ ಯಾವುದೇ ಕ್ರಿಮಿನಲ್ ಕೇಸ್ ದಾಖಲಿಸದಿರಲು ಅಮೆರಿಕನ್ ಪೊಲೀಸರು ನಿರ್ಧ–ರಿಸಿದ್ದಾರೆ.

ಸಿಯಾಟಲ್ ಪೊಲೀಸ್ ಅಧಿಕಾರಿ ಕೆವಿನ್ ಡೇವ್ ವಿರುದ್ಧ ಯಾವುದೇ ಕ್ರಿಮಿನಲ್ ಕೇಸ್ ದಾಖಲಿಸುವುದಿಲ್ಲ ಎಂದು ಕಿಂಗ್ ಕೌಂಟಿ ಪ್ರಾಸಿಕ್ಯೂಟರ್ ತಿಳಿಸಿದ್ದಾರೆ. ಜಾನ್ವಿ ಕಂದುಲಾ ಸಾವು ತುಂಬಾ ದುಃಖ ತಂದಿದೆ. ಪೊಲೀಸ್ ವಾಹನ ಡಿಕ್ಕಿ ಹೊಡೆದು, 23 ವರ್ಷದ ವಿದ್ಯಾರ್ಥಿ ಸಾವನ್ನಪ್ಪಿರೋದು ವಿಷಾದಕರ. ಆದರೆ ಕ್ರಿಮಿನಲ್ ಕೇಸ್ ದಾಖಲಿಸಿಕೊಳ್ಳಲು ಯಾವುದೇ ಪುರಾವೆ ಇಲ್ಲ ಎಂದು ತಿಳಿಸಿದ್ದಾರೆ.

ಕಳೆದ ಜನವರಿಯಲ್ಲಿ ಕಂದುಲಾ ಅವರು ಪೊಲೀಸ್ ಅಧಿಕಾ–ರಿಯ ವಾಹನಕ್ಕೆ ಬಲಿಯಾಗಿದ್ದಾರೆ. ವರದಿಗಳ ಪ್ರಕಾರ ಪೊಲೀಸ್ ಅಧಿಕಾರಿ ಕೆವಿನ್ ಡೇವ್ ಗಂಟೆಗೆ 119 ಕಿಲೋ ಮೀಟರ್ ಸ್ಪೀಡ್ನಲ್ಲಿ ಬಂದು ಆ್ಯಕ್ಸಿಡೆಂಟ್ ಮಾಡಿದ್ದ. ಆದರೆ ಉದ್ದೇಶಪೂರ್ವಕವಾಗಿ ಕೊಲೆ ಮಾಡಲಾಗಿದೆ ಎಂದು ಸಾಬೀತು ಮಾಡಲು ಸಾಕ್ಷ್ಯಗಳ ಕೊರತೆ ಇದೆ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ.

## ಬೆಳಗಾವಿ; ಮರಕ್ಕೆ ಡಿಕ್ಕಿ ಹೊಡೆದ ಕಾರು: ಒಂದೇ ಕುಟುಂಬದ 6 ಜನ ದುರ್ಮರಣ



ಬೆಳಗಾವಿ: ಮದುವೆ ಮುಗಿಸಿ ವಾಪಸ್ ಮನೆಗೆ ಬರುವಾಗ ಕಾರೊಂದು ಮರಕ್ಕೆ ಡಿಕ್ಕಿ ಹೊಡೆದು ಒಂದೇ ಕುಟುಂಬದ 6 ಜನ ದಾರುಣವಾಗಿ ಮೃತಪಟ್ಟಿರುವ ಘಟನೆ ಖಾನಾಪುರ ತಾಲೂಕಿನ ನಂದಗಡದಲ್ಲಿ ನಡೆದಿದೆ.

ಶಾರುಖ್ ಪೆಂಡಾರಿ (30) ಇಕ್ಬಾಲ್ ಜಮಾದಾರ (50) ಸಾನಿಯಾ ಲಂಗೊಟಿ (37) ಉಮರ್ ಲಂಗೋಟಿ (17) ಶಬನಮ್ ಲಂಗೋಟಿ (37) ಪರಾನ್ ಲಂಗೋಟಿ (13) ಮೃತಪಟ್ಟದ್ದು ಇನ್ನುಳಿದ ಮೂವರುಗಂಭೀರವಾಗಿ ಗಾಯಗೊಂಡಿದ್ದಾರೆ. ಭೀಕರ ಅಪಘಾತ ಕಂಡು ಸ್ಥಳೀಯರು ದಂಗಾಗಿದ್ದಾರೆ. ಮೃತರು ಧಾರವಾಡ ಮೂಲದವರು ಎನ್ನಲಾಗಿದೆ. ಮದುವೆ ಮುಗಿಸಿ ಮರಳಿ ಮನೆಗೆ ಹೋಗುವಾಗ ಸ್ವಿಫ್ಟ್ ಕಾರು ಚಾಲಕನ ನಿಯಂತ್ರಣ ತಪ್ಪಿ ಮರಕ್ಕೆ ಡಿಕ್ಕಿ ಹೊಡೆದಿದೆ. ಕಾರಿನಲ್ಲಿದ್ದ 9 ಜನರ ಪೈಕಿ 6 ಜನರು ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ಘಟನಾ ಸ್ಥಳಕ್ಕೆ ಎಸ್ಪಿ ಭೀಮಾಶಂಕರ ಗುಳೇದ ಅವರು ನಂದಗಡ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಹೆದ್ದಾರಿಗಳು ದೇಶದ ಅಭಿವೃದ್ಧಿಗೆ ರಾಜಮಾರ್ಗಗಳು: ನಿತಿನ್ ಗಡ್ಕರಿ



ಬೆಳಗಾವಿ: ದೇಶದಾದ್ಯಂತ ಗ್ರೀನ್ ಕಾ–ರಿಡಾರ್ ಹೆದ್ದಾರಿಗಳನ್ನು ಅಭಿವೃದ್ಧಿ ಪಡಿಸುವುದು ಕೇಂದ್ರ ಸರ್ಕಾರದ ಆದ್ಯತೆಯಾಗಿದೆ. ದೇಶದ ಪ್ರಮುಖ ನಗರಗಳ ಮಧ್ಯೆ ಹೆದ್ದಾರಿ ಕಾಮಗಾ–ರಿಗಳನ್ನು ಕೈಗೆತ್ತಿಕೊಂಡು ಪ್ರಯಾಣದ ಅವಧಿಯನ್ನು ಕಡಿಮೆಗೊಳಿಸಿ ಸುಗಮ, ಸುರಕ್ಷಿತ ಸಂಚಾರಕ್ಕೆ ಅವಕಾಶ ಕಲ್ಪಿಸಲಾಗುವುದು ಎಂದು ಕೇಂದ್ರ ರಸ್ತೆ ಹಾಗೂ ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿ ಹೇಳಿದರು.

ಬೆಳಗಾವಿ ಜಿಲ್ಲೆಯ 1622 ಕೋಟಿ ವೆಚ್ಚದ ಹೊನಗಾ–ಝೂಡಶಹಾಪುರ ಚತುಷ್ಪಥ ರಿಂಗ್ ರಸ್ತೆ, 941 ಕೋಟಿ ವೆಚ್ಚದ ಚಿಕ್ಕೋಡಿ ಬೈಪಾಸ್ ನಿಂದ–ಗೋಟೂರವರೆಗಿನ ಚತುಷ್ಪಥ ಹಾಗೂ ಶಿರಗುಪ್ಪಿಯಿಂದ ಅಂಕಲಿವರೆಗಿನ 887 ಕೋಟಿ ವೆಚ್ಚದ ರಸ್ತೆ ಅಗಲೀಕರಣ ಸೇ–ರಿದಂತೆ ಒಟ್ಟಾರೆ 13 ಸಾವಿರ ಕೋಟಿ ಮೌಲ್ಯದ 680 ಕಿ.ಮೀ. ಉದ್ದದ 36 ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಗುರುವಾರ(ಫೆ22) ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರ ಸಮರ್ಪಣೆ ಹಾಗೂ ಶಿಲಾನ್ಯಾಸ ನೆರವೇರಿಸಿ ಅವರು ಮಾತನಾಡಿದರು.

ಕಳೆದ ಅನೇಕ ವರ್ಷಗಳಿಂದ ಬೆಳಗಾವಿ ರಿಂಗ್ ರಸ್ತೆ ಸಮಸ್ಯೆ ಚರ್ಚೆಯಾಗಿತ್ತು. ಸುರೇಶ್ ಅಂಗಡಿ ಅವರು ಹಾಗೂ ಎಲ್ಲ ಶಾಸಕರು ಪ್ರಸ್ತಾಪಿಸಿದ್ದರು.

ಇದೀಗ ಬೆಳಗಾವಿ ರಿಂಗ್ ರಸ್ತೆಗೆ ಕಾಲ ಕೂಡಿ ಬಂದಿದೆ. ರಾಜ್ಯದಲ್ಲಿ 8200 ಕಿ.ಮೀ ರಾ.ಹೆ.ಇದೆ. ರಾಜ್ಯದಲ್ಲಿ 3 ಲಕ್ಷ ಕೋಟಿ ರೂಪಾಯಿ ವೆಚ್ಚದ ಕಾಮಗಾರಿ ಕೈಗೊಳ್ಳುವ ಗುರಿ ಇತ್ತು. ಇಂದು ಬಹುತೇಕ ಕಾಮಗಾರಿಗಳಿಗೆ ಚಾಲನೆ ದೊರೆತಿದೆ. ರಸ್ತೆಗಳು ಅಭಿವೃದ್ಧಿಗೆ ಮಾರ್ಗಗಳಾಗಿವೆ. ಬೆಳಗಾವಿ ಬೈಪಾಸ್ 3400 ಕೋಟಿ ವೆಚ್ಚದ ಈ ಕಾಮಗಾ–ರಿಯಿಂದ ಬೆಳಗಾವಿ–ಗೋವಾ ರಾಜ್ಯದ ನಡುವಿನ ಪ್ರಯಾಣದ ಅವಧಿಯನ್ನು ಕಡಿತಗೊಳಿಸಲಿದೆ.

**ಬೆಳಗಾವಿ–ರಾಯಚೂರ ಮಹತ್ವದ ಕಾ–ರಿಡಾರ್:**

ಬೆಳಗಾವಿ–ಹುನಗುಂದ–ರಾಯಚೂರ ರಾಷ್ಟ್ರೀಯ ಹೆದ್ದಾರಿಯ ನಿರ್ಮಾಣದ 9000 ಕೋಟಿ ವೆಚ್ಚದ ಕಾಮಗಾರಿಯು ಪೂರ್ಣಗೊಂಡ ಬಳಿಕ ಪ್ರಯಾಣದ ಅವಧಿಯು ಮೂರೂವರೆ ಗಂಟೆಗೆ ಇಳಿಯಲಿದೆ.

ಬೆಳಗಾವಿ–ಸಂಕೇಶ್ವರ ಹೆದ್ದಾರಿ ಅಗಲೀಕರಣ ಕಾಮಗಾರಿಗೆ ಅರಣ್ಯ ಇಲಾಖೆಯ ಅನುಮತಿ ಸಕಾಲದಲ್ಲಿ ದೊರಕದಿರುವುದರಿಂದ ಕಾಮಗಾರಿ ಕುಂಠಿತಗೊಂಡಿದೆ. ಆದ್ದರಿಂದ ರಾಜ್ಯ ಸರಕಾರವು ಅರಣ್ಯ ಇಲಾಖೆಯ ಅನುಮತಿ ದೊರಕಿಸಿಕೊಡುವುದರ ಜತೆಗೆ ಇತರೆ ಅಡ್ಡಿಗಳನ್ನು ನಿವಾರಿಸಿಕೊಟ್ಟರೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅನುಕೂಲವಾಗುತ್ತದೆ ಎಂದು ಗಡ್ಕರಿ ಹೇಳಿದರು.

ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ಹೆದ್ದಾರಿ ಜಾಲವನ್ನು ಜೋಡಿಸುವ ಮೂಲಕ ಒಟ್ಟಾರೆ ಪ್ರಯಾಣದ ಅವಧಿಯನ್ನು ಕಡಿಮೆಗೊಳಿಸುವುದರ ಜತೆಗೆ ಅಭಿವೃದ್ಧಿಗೆ ಪೂರಕವಾದ ವಾತಾವರಣ ಲಭಿಸಲಿದೆ ಎಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಆಶಯ ವ್ಯಕ್ತಪಡಿಸಿದರು.

**ಬೆಂಗಳೂರು ರಿಂಗ್ ರಸ್ತೆ– ಜನವರಿ 2025 ರಲ್ಲಿ ಪೂರ್ಣ:**

ಬೆಂಗಳೂರು ಸಂಚಾರ ದಟ್ಟಣೆ ಕಡಿಮೆಗೊಳಿಸಲು 17 ಸಾವಿರ ಕೋಟಿ ವೆಚ್ಚದ ರಿಂಗ್ ರಸ್ತೆ ನಿರ್ಮಾಣ ಮಾಡಲಾಗುತ್ತಿದೆ. ಇದರಿಂದ ಸಾರಿಗೆ ಸಮಸ್ಯೆ ನಿವಾರಣೆ ಜತೆಗೆ ರಾಜ್ಯದ ಜನರಿಗೆ ಅನುಕೂಲವಾಗಲಿದೆ.ಜನವರಿ 2025 ರ ವೇಳೆಗೆ ಆರು ಪ್ಯಾಕೇಜ್ ಗಳ ರಿಂಗ್ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ಎಂದು ಸಚಿವ ಗಡ್ಕರಿ ತಿಳಿಸಿದರು.

ಕರ್ನಾಟಕದ ಬಂದರುಗಳು ಅಭಿವೃದ್ಧಿಗೊಂಡರೆ ರಾಜ್ಯದ ಅಭಿವೃದ್ಧಿಯ ವೇಗ ಇನ್ನಷ್ಟು ಹೆಚ್ಚಾಗಲಿದೆ ಎಂದು ಅಭಿಪ್ರಾಯಪಟ್ಟ ಅವರು, ರಾಜ್ಯದ ಒಟ್ಟಾರೆ ಪ್ರಗತಿಯಲ್ಲಿ ರಸ್ತೆಗಳ ಪಾತ್ರ ಪ್ರಮುಖವಾಗಲಿದೆ ಎಂದರು.

ಲೋಕೋಪಯೋಗಿ ಇಲಾಖೆ ಕಳಿಸಿದ 17 ಪ್ರಮುಖ ಯೋಜನೆಗಳ ಬಗ್ಗೆ ಪರಿಶೀಲಿಸಲಾಗುತ್ತಿದೆ. ಆದಷ್ಟು ಬೇಗನೇ ಇವುಗಳಿಗೆ ಅಗತ್ಯ ಮಂಜೂರಾತಿ ನೀಡಲಾಗುವುದು. ಸಿ.ಆರ್.ಎಫ್. ಅಡಿ 2000 ಕೋಟಿ ವೆಚ್ಚದ ಕಾಮಗಾರಿಗಳನ್ನು ಕರ್ನಾಟಕ ರಾಜ್ಯಕ್ಕೆ ಮಂಜೂರು ಮಾಡಲಾಗಿದೆ ಎಂದು ಸಚಿವ ಗಡ್ಕರಿ ತಿಳಿಸಿದರು.

2ನೇ ಪುಟಕ್ಕೆ }

### ಬೆಳಗಾವಿಯಲ್ಲಿ ಎಥೆನಾಲ್ ಬಳಕೆಗೆ ಗಡ್ಕರಿ ಸಲಹೆ:

ಬೆಳಗಾವಿಯಲ್ಲಿ ಕಬ್ಬು ಬೆಳೆ ಜಾಸ್ತಿಯಾಗಿದೆ. ಎಥೆನಾಲ್ ಆರ್ಥಿಕತೆ ತೀವ್ರ ಬೆಳವಣಿಗೆ ಕಂಡಿದೆ. ಪೆಟ್ರೋಲ್ ಬದಲಾಗಿದೆ ಎಥೆನಾಲ್ ಬಳಕೆಗೆ ಪ್ರೋತ್ಸಾಹ ನೀಡಲು ಎಥೆನಾಲ್ ಪಂಪ್ ಸ್ಥಾಪನೆಗೆ ಅನುಮತಿ ನೀಡಲಾಗುತ್ತಿದೆ.

## ಗುಲ್ಮಾರ್ಗ್‌ನಲ್ಲಿ ಹಿಮಕುಸಿತ: ಒಬ್ಬ ವಿದೇಶಿ ಪ್ರಜೆ ಸಾವು, ಮತ್ತೊಬ್ಬ ನಾಪತ್ತೆ; ಐವರ ರಕ್ಷಣೆ



ಶ್ರೀನಗರ: ಜಮ್ಮು ಮತ್ತು ಕಾಶ್ಮೀರದ ಗುಲ್ಮಾರ್ಗ್‌ನ ಇಳಿಜಾರುಗಳಲ್ಲಿ ಗುರುವಾರ ಹಿಮಕುಸಿತ ಸಂಭವಿಸಿದ್ದು, ಘಟನೆಯಲ್ಲಿ ಓರ್ವ ವಿದೇಶಿ ಪ್ರಜೆ ಸಾವನ್ನಪ್ಪಿದ್ದು, ಮತ್ತೊಬ್ಬರು ನಾಪತ್ತೆಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಗುರುವಾರ ಮಧ್ಯಾಹ್ನ 2 ಗಂಟೆಯ ಸುಮಾರಿಗೆ ಕಾಂಗ್‌ದೂರಿ ಇಳಿಜಾ–ರಿನಲ್ಲಿ ಹಿಮಕುಸಿತ ಸಂಭವಿಸಿದೆ. ಇದರಿಂದ ಹಲವಾರು ಸ್ಕೀಯಿಂಗ್ ಪಟು ಸಿಕ್ಕಿಬಿದ್ದಿದ್ದಾರೆ. ಸ್ಥಳೀಯ ನಿವಾಸಿಗಳಿಲ್ಲದೇ ವಿದೇಶಿಗರು ಸ್ಕೀಯಿಂಗ್ ಇಳಿಜಾರುಗಳಿಗೆ ಹೋಗಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸದ್ಯ ಸೇನಾ ಸಿಬ್ಬಂದಿ ಮತ್ತು ಜಮ್ಮು ಮತ್ತು ಕಾಶ್ಮೀರದ ಗಸ್ತು ತಂಡ ರಕ್ಷಣಾ ಮತ್ತು ಶೋಧ ಕಾರ್ಯಾಚರಣೆಯನ್ನು ನಡೆಸುತ್ತಿದೆ. ಐವರು ಸ್ಕೀಯರ್‌ಗಳನ್ನು ರಕ್ಷಿಸಲಾಗಿದ್ದು, ಅವರಿಗೆ ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

“ಒಬ್ಬ ಸ್ಕೀಯರ್ ಮೃತಪಟ್ಟಿದ್ದಾರೆ. ಒಬ್ಬರು ಇನ್ನೂ ಕಾಣೆಯಾಗಿದ್ದಾರೆ ಮತ್ತು ಗಾಯಗೊಂಡಿದ್ದ ಐವರು ಸ್ಕೀಯರ್‌ಗಳನ್ನು ರಕ್ಷಿಸಲಾಗಿದೆ. ಅಪಘಾತದ ಬಗ್ಗೆ ತಿಳಿದ ತಕ್ಷಣ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು. ವಿದೇಶಿ ಸ್ಕೀಯರ್‌ಗಳ ಗುರುತು ಪತ್ತೆ ಮಾಡಲಾಗುತ್ತಿದೆ” ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಏತನ್ಮಧ್ಯೆ, ಖೇಲೋ ಇಂಡಿಯಾ ವಿಂಟರ್ ಗೇಮ್ಸ್ ಗುಲ್ಮಾರ್ಗ್‌ನಲ್ಲಿ ನಡೆಯುತ್ತಿದ್ದು, ಇದೇ ಪ್ರದೇಶದಲ್ಲಿ ಹಿಮಕುಸಿತ ಸಂಭವಿಸಿದೆ.

## ರಾಮ ಮಂದಿರ ನಿರ್ಮಾಣದ ನಂತರವೂ ಕಾಂಗ್ರೆಸ್ ನಕಾರಾತ್ಮಕವಾಗಿದೆ, ದ್ವೇಷವನ್ನು ಬಿಡುತ್ತಿಲ್ಲ: ಪ್ರಧಾನಿ ಮೋದಿ



ಮೆಹ್ಸಾನಾ: ಅಯೋಧ್ಯೆಯಲ್ಲಿ ಭವ್ಯ ರಾಮ ಮಂದಿರ ನಿರ್ಮಾಣವಾಗಿದ್ದರೂ ಕಾಂಗ್ರೆಸ್ ಋಣಾತ್ಮಕವಾಗಿಯೇ ಚಿಂತಿಸುತ್ತಿದೆ ಮತ್ತು ದ್ವೇಷದ ಹಾದಿಯನ್ನು ಬಿಡಲು ಸಿದ್ಧವಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಗುರುವಾರ ಪ್ರತಿಪಕ್ಷವನ್ನು ಗುರಿಯಾಗಿಸಿ ಟೀಕಿಸಿದ್ದಾರೆ.

ಗುಜರಾತ್‌ನ ಮೆಹ್ಸಾನಾ ಜಿಲ್ಲೆಯಲ್ಲಿ ವಲಿನಾಥ ಮಹಾದೇವ್ ದೇವಾಲಯವನ್ನು ಉದ್ಘಾಟಿಸಿದ ನಂತರ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದರು. 8,350 ರೂ. ಕೋಟಿಗೂ ಹೆಚ್ಚು ವೆಚ್ಚದ ವಿವಿಧ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದರು.

ಸ್ವತಂತ್ರ ಭಾರತದಲ್ಲಿ ದೀರ್ಘಕಾಲದವರೆಗೆ ಕಾಂಗ್ರೆಸ್ ಅಭಿವೃದ್ಧಿ ಮತ್ತು ಪರಂಪರೆಯ ನಡುವೆ ಸಂಘರ್ಷ ಮತ್ತು ದ್ವೇಷವನ್ನು ಸೃಷ್ಟಿಸಿದೆ. ಇದಕ್ಕೆ ಯಾರನ್ನಾದರೂ ದೂಷಿಸುವುದಾದರೆ, ಅದು ಕಾಂಗ್ರೆಸ್ ಆಗಿರುತ್ತದೆ. ಯಾಕೆಂದರೆ ದಶಕಗಳ ಕಾಲ ದೇಶವನ್ನು ಆಳಿದ್ದು ಇದೇ ಕಾಂಗ್ರೆಸ್. ಸೋಮನಾಥ (ದೇಗುಲ)ದಂತಹ ಪವಿತ್ರ ಸ್ಥಳವನ್ನೂ ವಿವಾದಕ್ಕೆ ಕಾರಣವನ್ನಾಗಿಸಿದವರು ಇದೇ ಜನರು ಎಂದರು

ಗುಜರಾತ್‌ನ ಪಂಚಮಹಲ್ ಜಿಲ್ಲೆಯ ಪಾವಗಡ ದೇವಸ್ಥಾನದಲ್ಲಿ ಧಾರ್ಮಿಕ ಧ್ವಜಾರೋಹಣ ಮಾಡುವ ಇಚ್ಛೆಯನ್ನು ಕಾಂಗ್ರೆಸ್ ತೋರಿಸಲಿಲ್ಲ ಮತ್ತು ದಶಕಗಳಿಂದ ಮೊಧೇರಾದ ಸೂರ್ಯ ದೇವಾಲಯವನ್ನು ಮತ ಬ್ಯಾಂಕ್ ರಾಜ–ಕೀಯಕ್ಕೆ ಬಳಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು.

ದೀಸಾದಲ್ಲಿ (ಗುಜರಾತ್‌ನ ಬನಸ್ಕಾಂತ ಜಿಲ್ಲೆಯಲ್ಲಿ) ಏರ್ ಫೋರ್ಸ್ ಸ್ಟೇಷನ್ ರನ್‌ವೇ ವಿಚಾರವಾಗಿ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ ಮೋದಿ,ಇದು ಭಾರತದ ಭದ್ರತೆಯ ಪ್ರಮುಖ ಕೇಂದ್ರವಾಗಿ ಅಭಿವೃದ್ಧಿ ಹೊಂದಲಿದೆ. ’ಅಂದಿನ ಗುಜರಾತ್ ಮುಖ್ಯಮಂತ್ರಿಯಾಗಿ ನಾನು ಹಲವಾರು ಪತ್ರಗಳನ್ನು ಬರೆದಿದ್ದೇನೆ ಮತ್ತು ಇದಕ್ಕಾಗಿ ಸಾಕಷ್ಟು ಪ್ರಯತ್ನಿಸಿದೆ. ಆದರೆ ಕೇಂದ್ರದಲ್ಲಿ ಆಗಿನ ಕಾಂಗ್ರೆಸ್ ಸರ್ಕಾರವು ಅಡೆತಡೆಗಳನ್ನು ಸೃಷ್ಟಿಸಲು ಪ್ರಯತ್ನಿಸಿದೆ ಎಂದರು.

ವಾಯುಪಡೆಯ ಜನರು ಸಹ ಭಾರತದ ಭದ್ರತೆಯ ದೃಷ್ಟಿಯಿಂದ ಈ ಸ್ಥಳವು ಮುಖ್ಯವಾಗಿದೆ ಎಂದು ಹೇಳಿದರು. ಆದ–’ರೆ, ಅವರು ಕೇಳಲಿಲ್ಲ. 2004 ರಿಂದ 2014 ರವರೆಗೆ ಕಾಂಗ್ರೆಸ್ ಸರ್ಕಾರ ಕಡತದ ಮೇಲೆ ಕುಳಿತಿತ್ತು. ಸುಮಾರು ಒಂದೂವರೆ ವರ್ಷಗಳ ಹಿಂದೆ, ನಾನು ಯೋಜನೆಗೆ ಅಡಿಪಾಯ ಹಾಕಿದೆ. ಏಕೆಂದರೆ ಮೋದಿ ತಾವು ನಿರ್ಧ–ರಿಸಿದ್ದನ್ನು ಮಾಡುತ್ತಾರೆ ಎಂದು ಪ್ರಧಾನಿ ಹೇಳಿದರು.

ಸಾರ್ವಜನಿಕ ಸಮಾರಂಭದಲ್ಲಿ ಪಾಲ್ಗೊಳ್ಳುವ ಮೊದಲು ಪ್ರಧಾನಿ ವಲಿನಾಥ ಧಾಮ್ ದೇವಾಲಯದ ಶಂಕುಸ್ಥಾಪನೆ ಸಮಾರಂಭದಲ್ಲಿ ಭಾಗವಹಿಸಿದ್ದರು.

## ಐಟಿ, ಇಡಿ ದಾಳಿ ಬಳಿಕ 30 ಸಂಸ್ಥೆಗಳು ಬಿಜೆಪಿಗೆ 335 ಕೋಟಿ ರೂ. ದೇಣಿಗೆ ನೀಡಿವೆ: ಕಾಂಗ್ರೆಸ್



ನವದೆಹಲಿ: ನರೇಂದ್ರ ಮೋದಿ ಸರ್ಕಾರ ಸುಲಿಗೆ ಮತ್ತು ಆರ್ಥಿಕ ಭಯೋತ್ಪಾದನೆಯ ಮೂಲಕ ಪ್ರಜಾಪ್ರಭುತ್ವವನ್ನು ನಾಶಪಡಿಸುತ್ತಿದೆ ಎಂದು ಗುರುವಾರ ವಾಗ್ದಾಳಿ ನಡೆಸಿದ ಕಾಂಗ್ರೆಸ್, ಸಿಬಿಐ, ಇಡಿ ಮತ್ತು ಆದಾಯ ತೆರಿಗೆ ಇಲಾಖೆಯಂತಹ ತನಿಖಾ ಸಂಸ್ಥೆಗಳ ದಾಳಿಯ ನಂತರ ಕನಿಷ್ಠ 30 ಸಂಸ್ಥೆಗಳು ಬಿಜೆಪಿಗೆ ಭಾರಿ ಮೊತ್ತದ ದೇಣಿಗೆ ನೀಡಿವೆ ಎಂದು ಆರೋಪಿಸಿದೆ.

ತನಿಖಾ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಂಡ ನಂತರ 30 ಸಂಸ್ಥೆಗಳು ಬಿಜೆಪಿಗೆ 335 ಕೋಟಿ ರೂಪಾಯಿ ದೇಣಿಗೆ ನೀಡಿವೆ ಎಂದು ಕಾಂಗ್ರೆಸ್ ಮಾಧ್ಯಮ ವರದಿಗಳನ್ನು ಉಲ್ಲೇಖಿಸಿ, ಆರೋಪಿಸಿದೆ. ಪೈಕಿ 23 ಕಂಪನಿಗಳು 2014ರಿಂದ ದಾಳಿ ನಡೆದ ವರ್ಷದವರೆಗೆ ಬಿಜೆಪಿಗೆ ಯಾವುದೇ ದೇಣಿಗೆ ನೀಡಿಲ್ಲ ಎಂದು ವರದಿ ಹೇಳಿದೆ.

ಸುಲಿಗೆ ಮತ್ತು ಆರ್ಥಿಕ ಭಯೋತ್ಪಾದನೆಯ ಮೂಲಕ ನಿರಂಕುಶಾಧಿಕಾರದ ಮೋದಿ ಸರ್ಕಾರ ಪ್ರಜಾಪ್ರಭುತ್ವವನ್ನು ಹಾಳು ಮಾಡುತ್ತಿದೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ಕೇಂದ್ರೀಯ ತನಿಖಾ ಸಂಸ್ಥೆ(ಸಿಬಿಐ), ಜಾರಿ ನಿರ್ದೇಶನಾಲಯ(ಇಡಿ) ಮತ್ತು ಐಟಿ ಇಲಾಖೆ ದಾಳಿ ನಡೆಸಿದ ನಂತರ ಕೆಲವೇ ತಿಂಗಳುಗಳಲ್ಲಿ ಈ ಸಂಸ್ಥೆಗಳು ಬಿಜೆಪಿಗೆ ಹೆಚ್ಚಿನ ಮೊತ್ತವನ್ನು ನೀಡಿರುವುದಾಗಿ ವರದಿಗಳು ತೋರಿಸುತ್ತಿವೆ ಎಂದು ಖರ್ಗೆ ತಿಳಿಸಿದ್ದಾರೆ.

“ಒಂದೆಡೆ ಮೋದಿ ಸರ್ಕಾರವು ಪ್ರಾಮಾಣಿಕವಾಗಿ ಕಾಂಗ್ರೆಸ್ ಪಕ್ಷಕ್ಕೆ ದೇಣಿಗೆ ನೀಡಿದ ಜನರ ದುಡಿಮೆಯ ಹಣವನ್ನು ಕದಿಯಲು ಬಯಸುತ್ತಿದೆ ಮತ್ತು ಇನ್ನೊಂದೆಡೆ ಇಡಿ, ಸಿಬಿಐ, ಐ–ಟಿ ಇತ್ಯಾದಿಗಳ ಮೂಲಕ ಕಾರ್ಪೊರೇಟ್ ಸಂಸ್ಥೆಗಳಿಗೆ ಬೆದರಿಕೆ ಹಾಕುತ್ತಿದೆ ಎಂದು ಖರ್ಗೆ ಹೇಳಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಅವರು, ನರೇಂದ್ರ ಮೋದಿ ಸರ್ಕಾರ, ಆದ–ಾಯ ತೆರಿಗೆ ಇಲಾಖೆ ಮತ್ತು ಇತರ ಏಜೆನ್ಸಿಗಳ ಮೂಲಕ 30 ಕಂಪನಿಗಳ ಮೇಲೆ ದಾಳಿ ನಡೆಸುವ ಮೂಲಕ ಬಿಜೆಪಿಗೆ 335 ಕೋಟಿ ರೂ. ದೇಣಿಗೆ ನೀಡುವಂತೆ ಒತ್ತಾಯಿಸಿದೆ ಎಂದು ಆರೋಪಿಸಿದ್ದಾರೆ.

“ಪ್ರತಿಪಕ್ಷಗಳ ಲೂಟಿ ಮತ್ತು ಬಿಜೆಪಿಯ ಬೊಕ್ಕಸವನ್ನು ತುಂಬಲು ದಾನಿಗಳನ್ನು ಬ್ಲ್ಯಾಕ್‌ಮೇಲ್ ಮಾಡುವುದು ನಮ್ಮ ಪ್ರಜಾಪ್ರಭುತ್ವದ ಕರಾಳ ಘಟ್ಟ! ನಾವು ಇದರ ವಿರುದ್ಧ ನ್ಯಾಯಾಲಯದಲ್ಲಿ ಮತ್ತು ಜನರ ನ್ಯಾಯಾಲಯದಲ್ಲಿ ಹೋರಾಡುತ್ತೇವೆ” ಎಂದು ಎಐಸಿಸಿ ಅಧ್ಯಕ್ಷರು ತಿಳಿಸಿದ್ದಾರೆ.

## ಕರ್ನಾಟಕ ಪೊಲೀಸ್ ತಿದ್ದುಪಡಿ ವಿಧೇಯಕ ಅಂಗೀಕಾರ: ಇನ್ಮುಂದೆ ಕನಿಷ್ಟ ’2 ವರ್ಷ’ಕ್ಕೊಮ್ಮೆ ವರ್ಗಾವಣೆ



ಬೆಂಗಳೂರು: ವಿಧಾನಸಭೆಯಲ್ಲಿ ಕರ್ನಾಟಕ ಪೊಲೀಸ್ ತಿದ್ದುಪಡಿ ವಿಧೇಯಕ ಅಂಗೀಕಾರಗೊಂಡಿದೆ. ಇದರೊಂದಿಗೆ ವರ್ಗಾವಣೆ ನಿರೀಕ್ಷೆಯಲ್ಲಿದ್ದಂತ ಪೊಲೀಸ–ರಿಗೆ ಗುಡ್ ನ್ಯೂಸ್ ಸಿಕ್ಕಿದೆ. ಇನ್ಮುಂದೆ ಕನಿಷ್ಠ 2 ವರ್ಷಕ್ಕೊಮ್ಮೆ ಪೊಲೀಸರ ವರ್ಗಾವಣೆಯಾಗಲಿದೆ. ಈ ಕುರಿತಂತೆ ನಿವೃತ್ತ ಪೊಲೀಸ್ ಅಧಿಕಾರಿ ಶಂಕರ್ ಬಿದರಿಯವರು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅವರಿಗೆ ಕರ್ನಾಟಕ ಪೊಲೀಸ್ ತಿದ್ದುಪಡಿ ವಿಧೇಯಕ ಬದಲಾವಣೆಗೆ ಮನವಿ ಮಾಡಿದ್ದರು. ಈ ಮನವಿಗೆ ಒಪ್ಪಿಗೆ ಸೂಚಿಸಿದ್ದಂತ ಅವರು, ವಿಧಾನಸಭೆಯಲ್ಲಿ ತಿದ್ದುಪಡಿ ವಿಧೇಯಕವನ್ನು ಮಂಡಿಸಿದ್ದರು. ಇಂತಹ ಕರ್ನಾಟಕ ಪೊಲೀಸ್ ತಿದ್ದುಪಡಿ ವಿಧೇಯಕ ಅಂಗೀಕಾರಗೊಂಡಿದೆ. ಇನ್ನೂ ಈ ಬೆನ್ನಲ್ಲೇ ವಿಧಾನ ಪರಿಷತ್ತಿನಲ್ಲಿಯೂ ಕರ್ನಾಟಕ ಪೊಲೀಸ್ ತಿದ್ದುಪಡಿ ವಿಧೇಯಕವನ್ನು ಗೃಹ ಸಚಿವ ಡಾ.ಜಿ ಪರಮೇಶ್ವರ್ ಮಂಡಿಸಿದ್ದಾರೆ. ಇಲ್ಲಿಯೂ ಅಂಗೀಕಾರ ದೊರೆತರೇ, ಪೊಲೀಸರ ವರ್ಗಾವಣೆ ಮತ್ತಷ್ಟು ಸುಲಭವಾಗಲಿದೆ. ಕರ್ನಾಟಕ ಪೊಲೀಸ್ ತಿದ್ದುಪಡಿ ವಿಧೇಯಕ ಅಂಗೀಕರಾದಿಂದಾಗಿ ಕನಿಷ್ಠ 2 ವರ್ಷಕ್ಕೊಮ್ಮೆ ಪೊಲೀಸರ ವರ್ಗಾವಣೆಗೆ ಅಧಿಸೂಚನೆ ಹೊರ ಬೀಳಲಿದೆ. ಈ ಮೂಲಕ ವರ್ಗಾವಣೆ ನಿರೀಕ್ಷೆಯಲ್ಲಿದ್ದಂತ ಪೊಲೀಸರಿಗೆ ಗುಡ್ ನ್ಯೂಸ್ ದೊರೆತಂತೆ ಆಗಲಿದೆ.

## ಸಿದ್ದು ಸವದಿಗೆ ಹೇಳಿಕೆಗೆ ಸಚಿವೆ ತಿರುಗೇಟು; ಗೃಹಲಕ್ಷ್ಮಿ ಯೋಜನೆ ಅತ್ಯಂತ ಯಶಸ್ವಿ : ಲಕ್ಷ್ಮೀ ಹೆಬ್ಬಾಳಕರ್



ಬೆಂಗಳೂರು: ಗೃಹಲಕ್ಷ್ಮಿ ಯೋಜನೆಯಿಂದ ರಾಜ್ಯದ ಮಹಿಳೆಯರ ಆರ್ಥಿಕ ಸ್ಥಿತಿ ಸುಧಾ–ರಿಸಿದ್ದು, ಸುಮಾರು 1.18 ಕೋಟಿ ಮಹಿಳೆಯ–ರಿಗೆ ಪ್ರತಿ ತಿಂಗಳು ಗೃಹಲಕ್ಷ್ಮಿ ಯೋಜನೆಯ ಹಣ ಬಿಡುಗಡೆ ಮಾಡುತ್ತಿದ್ದೇವೆ. ಗೃಹಲಕ್ಷ್ಮಿ ಯೋಜನೆ ಯಶಸ್ವಿಯಾಗಿ ನಡೆಯುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ತಿಳಿಸಿದ್ದಾರೆ.

ಬಜೆಟ್ ಮೇಲಿನ ಚರ್ಚೆ ವೇಳೆ ಗುರುವಾರ ತೇರದಾಳ ಕ್ಷೇತ್ರದ ಬಿಜೆಪಿ ಶಾಸಕ ಸಿದ್ದು ಸವದಿ ಗೃಹಲಕ್ಷ್ಮಿ ಯೋಜನೆ ಅರ್ಹರಿಗೆ ತಲುಪುತ್ತಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಕ್ಕೆ ಪ್ರತಿಕ್ರಿಯಿಸಿದ ಸಚಿವರು, ಯೋಜನೆಗೆ 1.28 ಕೋಟಿ ಮಹಿಳೆಯರು ಅರ್ಹ–ರಿದ್ದು, ಈ ಪೈಕಿ ಯೋಜನೆಗೆ ನೋಂದಣಿಯಾಗಿರುವ 1.18 ಕೋಟಿ ಫಲಾನುಭವಿಗಳಿಗೆ ಹಣ ಬಿಡುಗಡೆ ಮಾಡಲಾಗುತ್ತಿದೆ. ಬಜೆಟ್‌ನಲ್ಲಿ ವಾರ್ಷಿಕ 34 ಸಾವಿರ ಕೋಟಿ ರೂಪಾಯಿಗಳನ್ನು ಮೀಸಲಿಡಲಾಗಿದೆ ಎಂದರು.

ಇದೊಂದು ದೊಡ್ಡ ಯೋಜನೆ. ಗೃಹಲಕ್ಷ್ಮಿ ಬಂದ ಬಳಿಕ ಮಹಿಳೆಯರ ಆರ್ಥಿಕ ಸ್ಥಿತಿ ಸುಧಾರಣೆಯಾಗಿದೆ ಎಂದು ಹೇಳಿದರು. ಎಲ್ಲಾ ಫಲಾನುಭವಿಗಳು ಸರ್ಕಾರಕ್ಕೆ ಆಶೀರ್ವಾದ ಮಾಡುತ್ತಿದ್ದಾರೆ. ನೀವಷ್ಟೇ (ವಿರೋಧ ಪಕ್ಷ) ಯೋಜನೆ ಬಗ್ಗೆ ಆಕ್ಷೇಪ ವ್ಯಕ್ತಪಡಿಸುತ್ತಿದ್ದೀರಿ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ತಿರುಗೇಟು ನೀಡಿದರು.

ಗೃಹಲಕ್ಷ್ಮಿ ಯೋಜನೆ ನಿಮ್ಮ ಕ್ಷೇತ್ರದಲ್ಲಿ ಎಷ್ಟು ಮಂದಿಗೆ ತಲುಪಿದೆ. ಇದರಿಂದ ಆಗಿರುವ ಅನುಕೂಲವೇನು ಎನ್ನುವುದನ್ನು ಅಂಕಿ ಅಂಶ ಸಮೇತ ಬೇಕಿದ್ದರೆ ನೀಡುವೆ. ಅನಾವಶ್ಯಕವಾಗಿ ಯೋಜನೆ ಬಗ್ಗೆ ಟೀಕೆ ಮಾಡಬೇಡಿ ಎಂದು ಹೇಳಿದರು.

ಸರಾಸರಿ ನೂರು ಜನರಲ್ಲಿ 97 ಮಂದಿಗೆ ಯೋಜನೆ ತಲುಪಿದ್ದು, ಉಳಿದ ಮೂರು ಮಂದಿಗೆ ಕೆಲವೊಂದು ಕಾರಣದಿಂದ ತಲುಪಿಲ್ಲ. ಈ ಸಮಸ್ಯೆಗೆ ನಮ್ಮ ಇಲಾಖೆಯ ಅಧಿಕಾರಿಗಳು ಪರಿಹಾರ ನೀಡುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

ಗೃಹಲಕ್ಷ್ಮಿ ಯೋಜನೆಯ ಹಣ ನೇರವಾಗಿ ಫಲಾನುಭವಿಗಳಿಗೆ ತಲುಪುತ್ತಿದೆ. ಇಲ್ಲಿ ಮಧ್ಯವರ್ತಿಗಳ ಕಾಟ ಇರುವುದಿಲ್ಲ. ವಿಧವಾ ವೇತನ ಪಡೆಯಲು ಲಂಚ ನೀಡುವ ಸ್ಥಿತಿ ಇತ್ತು. ಆದರೆ ಗೃಹಲಕ್ಷ್ಮಿ ನೇರವಾಗಿ ಫಲಾನುಭವಿಗಳಿಗೆ ತಲುಪುತ್ತಿದೆ. ಹಿರಿಯ ಶಾಸಕರು ಸದನಕ್ಕೆ ತಪ್ಪು ಮಾಹಿತಿ ನೀಡಬಾರದು ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿನಂತಿಸಿಕೊಂಡರು.

# ಚುನಾವಣಾ ಕರ್ತವ್ಯ ಅಚ್ಚುಕಟ್ಟಾಗಿ ನಿರ್ವಹಿಸಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ



ಬಳ್ಳಾರಿ: ಬರುವ ಲೋಕಸಭಾ ಚುನಾವಣೆಯನ್ನು ಮುಕ್ತ ಮತ್ತು ಪಾರದರ್ಶಕವಾಗಿ ನಡೆಸಲು ಹಾಗೂ ಯಾವುದೇ ಲೋಪವಾಗದಂತೆ ಅಧಿಕಾರಿಗಳು ತಮಗೆ ವಹಿಸಿದ ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಲೋಕಸಭಾ ಚುನಾವಣೆ ಸಂಬಂಧ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ವಿವಿಧ ನೋಡಲ್ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಲೋಕಸಭೆ ಮತ ಕ್ಷೇತ್ರವಾದ ಅಖಂಡ ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು 8 ವಿಧಾನಸಭಾ ಕ್ಷೇತ್ರಗಳಿದ್ದು, ಅದರಲ್ಲಿ ಬಳ್ಳಾರಿ ಜಿಲ್ಲೆಯ 4 ಕ್ಷೇತ್ರ, ವಿಜಯನಗರ ಜಿಲ್ಲೆಯ 4 ಕ್ಷೇತ್ರ ಒಳಗೊಂಡಿದೆ. ಸಿರುಗುಪ್ಪ ಕ್ಷೇತ್ರ ಕೊಪ್ಪಳ ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಸೇರಿದೆ. ಚುನಾವಣೆಯನ್ನು ಯಶಸ್ವಿಯಾಗಿ ಮತ್ತು ಪಾರದರ್ಶಕವಾಗಿ ನಡೆಸಲು ಅಗತ್ಯ ಸಿದ್ಧತೆ ಈಗಿನಿಂದಲೇ ಮಾಡಿಕೊಳ್ಳಬೇಕು. ಚುನಾವಣಾ ಕಾರ್ಯವನ್ನು ತಂಡವಾಗಿ ಕಾರ್ಯ ನಿರ್ವಹಿಸಿ ಯಶಸ್ವಿಗೊಳಿಸಲು ಎಲ್ಲರ ಸಹಕಾರ ಬೇಕು ಎಂದರು.

ಈಗಾಗಲೇ ಚುನಾವಣಾ ಕಾರ್ಯಕ್ಕೆ ನೇಮಿಸಿದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಕಾಲಕಾಲಕ್ಕೆ ತರಬೇತಿ ನೀಡಿ ಸಜ್ಜುಗೊಳಿಸಬೇಕು ಎಂದು ಹೇಳಿದರು.

ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಗಳಂತೆ ಚುನಾವಣೆ ನಡೆಸಲು ಜಿಲ್ಲಾಡಳಿತವು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ಪ್ರತಿ ನೋಡಲ್ ಅಧಿಕಾರಿ ತನ್ನ ವಿಭಾಗದ ಕಾರ್ಯ ಮತ್ತು ಜವಾಬ್ದಾರಿಗಳ ಕುರಿತು ತರಬೇತಿ ನೀಡಿ, ತನ್ನ ತಂಡವನ್ನು ಸುಸಜ್ಜಿತಗೊಳಿಸುವುದು ಅವರ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಎಫ್‌ಎಸ್ಟಿ, ಎಸ್‌ಎಸ್ಟಿ ಹಾಗೂ ಇತರ ತಂಡಗಳ ಮಧ್ಯ ಪರಸ್ಪರ ಸಮನ್ವಯ, ಸಂವಹನ ಇರಬೇಕು. ಚುನಾವಣಾ ಕಾರ್ಯಗಳಲ್ಲಿ ಎಚ್ಚರಿಕೆ ವಹಿಸುವ ಮೂಲಕ ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡದಂತೆ ನೋಡಿಕೊಳ್ಳಬೇಕು. ಪ್ರತಿಯೊಬ್ಬ ಅಧಿಕಾರಿಗಳು ತನಗೆ ನಿಯೋಜಿಸಿದ ಚುನಾವಣಾ ಕಾರ್ಯಗಳ ಬಗ್ಗೆ ಜವಾಬ್ದಾರಿ ಮತ್ತು ಕರ್ತವ್ಯಗಳನ್ನು ಅರ್ಥೈಸಿಕೊಂಡು ಕರ್ತವ್ಯ ನಿರ್ವಹಿಸಬೇಕು ಎಂದು ಎಂದರು.

ಸ್ಟ್ರಾಂಗ್ ರೂಂಗಳ ಪರಿಶೀಲನೆ ಕೈಗೊಳ್ಳಬೇಕು. ಮಸ್ಟರಿಂಗ್ ಮತ್ತು ಡಿಮಸ್ಟರಿಂಗ್ ಕುರಿತು ತರಬೇತಿ ನೀಡಬೇಕು. ಮತ ಯಂತ್ರಗಳ ರ್ಯಾಂಡಮೈಜೇಷನ್ ಕೈಗೊಳ್ಳಲಾಗುವುದು. ಚುನಾವಣಾ ಮಾದರಿ ನೀತಿ ಜಾರಿಯಾದ ಕೂಡಲೇ ಎಲ್ಲ ತಂಡಗಳು ಕಾರ್ಯ ನಿರತವಾಗಲಿವೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರು ಅವರು ಮಾತನಾಡಿ, ಚುನಾವಣೆ ಸುಗಮವಾಗಿ ನಡೆಸಲು ನಿಯೋಜಿಸಿದ ಪೊಲೀಸ್ ಇಲಾಖೆ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ತರಬೇತಿ ನೀಡಲಾಗುತ್ತಿದೆ. ಅಲ್ಲದೆ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಮತಗಟ್ಟೆಗಳನ್ನು ಗುರುತಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ. ಜಿಲ್ಲೆಯ ಗಡಿಭಾಗಗಳಲ್ಲಿ ಚೆಕ್ಪೋಸ್ಟ್ ಹಾಕಲು ಕ್ರಮ ವಹಿಸಲಾಗುವುದು. ಯಾವುದೇ ಅಹಿತಕರ ಘಟನೆಗಳು ಕಂಡುಬಂದಲ್ಲಿ ಮಾಹಿತಿ ನೀಡಲಾಗುವುದು ಎಂದು ಜಿಲ್ಲಾಧಿಕಾರಿಯವರಿಗೆ ತಿಳಿಸಿದರು.

ಆದಾಯ ತೆರಿಗೆ ಇಲಾಖೆ ಅಧಿಕಾರಿ ನಿಶಾಂತ್ ಅವರು ಮಾತನಾಡಿ, ಚುನಾವಣೆ ಸಂದರ್ಭದಲ್ಲಿ ಎಂಸಿಸಿ ಅಥವಾ ಇತರೆ ತಂಡವು ಕೈಗೊಳ್ಳುವ ಕಾರ್ಯಾಚರಣೆಯಲ್ಲಿ ಹೆಚ್ಚಿನ ಮೊತ್ತದ ಹಣ ಸೀಜ್ ಮಾಡಿದ ಕೂಡಲೆ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳ ಗಮನಕ್ಕೆ ತರಬೇಕು, ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ಯಾವುದೇ ಸಮಯದಲ್ಲಿ ಯಾವುದೇ ಸ್ಥಳದಲ್ಲಿ ದಾಳಿ ನಡೆಸಿ, ತನಿಖೆ ತಡೆಸುವ ಅಧಿಕಾರಿ ಹೊಂದಿದೆ. ಹೀಗಾಗಿ ಚುನಾವಣೆ ಸಂದರ್ಭದಲ್ಲಿ ಅಧಿಕಾರಿಗಳು ಆದಾಯ ತೆರಿಗೆ ಇಲಾಖೆ ಅಧಿಕಾರಿಗಳೊಂದಿಗೆ ಸಮನ್ವಯ ಮಾಡಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರೂ ಆದ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್, ಸಹಾಯಕ ಆಯುಕ್ತ ಹೇಮಂತ್. ಎನ್ ಸೇರಿದಂತೆ ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಿದ ನೋಡೆಲ್ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ಅರ್ಜಿ ಆಹ್ವಾನ

ಬಳ್ಳಾರಿ: ಕರ್ನಾಟಕ ಪರೀಕ್ಷಾ ಪ್ರಾಧಿಕಾರ ವತಿಯಿಂದ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ (ಸ್ಥಳೀಯ) ವೃಂದದಲ್ಲಿರುವ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇರ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇರ ನೇಮಕಾತಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುತ್ತದೆ. ಗ್ರಾಮ ಆಡಳಿತ ಅಧಿಕಾರಿ ಹುದ್ದೆಗೆ ಅಭ್ಯರ್ಥಿಗಳು ಒಂದು ಜಿಲ್ಲೆಗೆ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿದ್ದು, ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು. ಎರಡನೇ ಪಿ.ಯು.ಸಿ ಅಥವಾ ತತ್ಸಮಾನ ಪದವಿ ಪಡೆದ ಅಭ್ಯರ್ಥಿಗಳು ಅರ್ಹರಾಗಿರುತ್ತಾರೆ.

ಒಟ್ಟು 1000 ಹುದ್ದೆಗಳಿಗೆ ನೇಮಕಾತಿ ನಡೆಯಲಿದ್ದು, ಅಭ್ಯರ್ಥಿಯು ಎರಡನೇ ಪಿಯುಸಿ ಅಥವಾ ತತ್ಸಮಾನತೆಯ ಶೈಕ್ಷಣಿಕ ವಿದ್ಯಾರ್ಹತೆಯನ್ನು ಪಡೆದಿರಬೇಕು. ಆಯ್ಕೆಯಾದ ಅಭ್ಯರ್ಥಿಗಳಿಗೆ ವೇತನ 21,400–42,000 ನಿಗದಿಯಾಗಿರುತ್ತದೆ.

ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಇಲಾಖೆಯ ಅಧಿಕೃತ ವೆಬ್ಸೈಟ್ನಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಮಾರ್ಚ್ 04 ರಿಂದ ಆರಂಭವಾಗಲಿದ್ದು, ಏಪ್ರೀಲ್ 03 ರವರೆಗೆ ಅವಕಾಶವಿದೆ. ಆನ್ಲೈನ್ ಮೂಲಕ ಶುಲ್ಕ ಪಾವತಿ ಮಾಡಲು ಏಪ್ರೀಲ್ 06 ಕೊನೆಯ ದಿನಾಂಕವಾಗಿರುತ್ತದೆ. ಇಲಾಖೆಯ ಅಧಿಕೃತ ವೆಬ್ಸೈಟ್ **http://kea.kar.nic.in** ನಲ್ಲಿ ತೋರಿಸುವ **"Village Administrative Officer Recruitment-** 2024" ಲಿಂಕ್ ಅನ್ನು ಆಯ್ಕೆ ಮಾಡಿ ಆನ್ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬಹುದು. ಪೆನ್ ಮತ್ತು ಪೇಪರ್ ಉಪಯೋಗಿಸಿ ಅರ್ಜಿಯನ್ನು ಸಲ್ಲಿಸುವ ವಿಧಾನ ಇರುವುದಿಲ್ಲ.


ಅಭ್ಯರ್ಥಿಗಳ ಅರ್ಹತೆ ವಿವರ, ವಯೋಮಿತಿ, ಸ್ಪರ್ಧಾತ್ಮಕ ಪರೀಕ್ಷೆ, ಆಯ್ಕೆ ಪ್ರಕ್ರಿಯೆ ಮತ್ತು ನೇಮಕಾತಿಯ ವಿವರ ಹಾಗೂ ಪ್ರವರ್ಗವಾರು ಮತ್ತು ಜಿಲ್ಲಾವಾರು ಹುದ್ದೆಗಳ ವಿವರಗಳು ಹಾಗೂ ಇನ್ನಿತರ ಮಾಹಿತಿಗಾಗಿ ಕೆಇಎ ವೆಬ್ಸೈಟ್: **http://kea.kar.nic.in** ಗೆ ಸಂಪರ್ಕಿಸಬಹುದು.

**ಸೂಚನೆ:** ಆನ್ಲೈನ್ ಮೂಲಕ ಅರ್ಜಿ ಸಲ್ಲಿಸುವುದು, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವುದು ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆಯುವುದು ಅಭ್ಯರ್ಥಿಗಳಿಗೆ ಗ್ರಾಮ ಆಡಳಿತ ಅಧಿಕಾರಿ ನೇಮಕಾತಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ. ನೇಮಕಾತಿಯು ಸರ್ಕಾರ, ಸಕ್ಷಮ ಪ್ರಾಧಿಕಾರ, ನೇಮಕಾತಿ ಪ್ರಾಧಿಕಾರವು ನಿಗದಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## ರೈತ ವಿದ್ಯಾನಿಧಿ, ಭೂರಹಿತ ಕೃಷಿ ಕಾರ್ಮಿಕರ ವಿದ್ಯಾನಿಧಿ ಕಾರ್ಯಕ್ರಮದಡಿ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

ಬಳ್ಳಾರಿ: ಕೃಷಿ ಇಲಾಖೆ ವತಿಯಿಂದ ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮ ಹಾಗೂ ಭೂರಹಿತ ಕೃಷಿ ಕಾರ್ಮಿಕರ ವಿದ್ಯಾನಿಧಿ ಕಾರ್ಯಕ್ರಮದಡಿ ವಿದ್ಯಾರ್ಥಿ ವೇತನ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕ ಕೆ.ಮಲ್ಲಿಕಾರ್ಜುನ ಅವರು ತಿಳಿಸಿದ್ದಾರೆ. ವಿದ್ಯಾರ್ಥಿ ವೇತನ ಪಡೆಯುವ ಸಾಮಾನ್ಯ ವರ್ಗದ ವಿದ್ಯಾರ್ಥಿಗಳ ಪೋಷಕರ ಆದಾಯ ರೂ.2.5 ಲಕ್ಷ ಮೀರಿರಬಾರದು. ಸಾಮಾನ್ಯ ವರ್ಗದಡಿ ಬರುವ ರೈತರ ಮಕ್ಕಳು ತಮ್ಮ ಪೋಷಕರ ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸಲು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದ (ಎಸ್‌ಎಸ್ಪಿ) ವಿದ್ಯಾರ್ಥಿಗಳ ಲಾಗಿನ್ನಲ್ಲಿ ಅವಕಾಶ ಕಲ್ಪಿಸಲಾಗಿದ್ದು, ಫೆ.29 ರೊಳಗೆ ಪ್ರಮಾಣ ಪತ್ರವನ್ನು ಅಪ್ಲೋಡ್ ಮಾಡಬೇಕು. 2023–24ನೇ ಸಾಲಿನಲ್ಲಿ ಇತರೆ ಇಲಾಖೆಗಳ (ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಇತರೆ ಇಲಾಖೆಗಳು) ಯೋಜನೆಯಡಿ ವಿದ್ಯಾರ್ಥಿ ವೇತನ ಪಡೆಯುತ್ತಿರುವ ವಿದ್ಯಾರ್ಥಿಗಳು ಮುಖ್ಯಮಂತ್ರಿ ರೈತ ವಿದ್ಯಾನಿಧಿ ಕಾರ್ಯಕ್ರಮ ಹಾಗೂ ಭೂರಹಿತ ಕೃಷಿ ಕಾರ್ಮಿಕರ ವಿದ್ಯಾನಿಧಿ ಕಾರ್ಯಕ್ರಮದಡಿ ವಿದ್ಯಾರ್ಥಿ ವೇತನ ಪಡೆಯಲು ಅರ್ಹರಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವಕ ಕಾಣೆ: ಪತ್ತೆಗೆ ಮನವಿ



ಬಳ್ಳಾರಿ: ತಾಲ್ಲೂಕಿನ ಪಿ.ಡಿ ಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಫ್ಯಾಕ್ಟರಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಉತ್ತರ ಪ್ರದೇಶ ಮೂಲದ ಹೊನ್ನೂರ ವಲಿ ಎನ್ನುವ 24 ವಷರ್ಷದ ಯುವಕ ಜ.20ರಂದು ಕಾಣೆಯಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಪಿ.ಡಿ ಹಳ್ಳಿ ಪೊಲೀಸ್ ಠಾಣೆಯ ಸಬ್ ಇನ್ಸ್ಪೆಕ್ಟರ್ ಮನವಿ ಮಾಡಿದ್ದಾರೆ. ಕಾಣೆಯಾದ ಯುವಕನ ಚಹರೆ: ಎತ್ತರ 5 ಅಡಿ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಉದ್ದನೆಯ ಮುಖ ಹೊಂದಿರುತ್ತಾನೆ.

ಯುವಕ ಕಾಣೆಯಾದ ಸಂದರ್ಭದಲ್ಲಿ ಪಿಂಕ್ ಕಲರ್ ಟೀ ಶರ್ಟ್ ಮತ್ತು ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಈ ಮೇಲ್ಕಂಡ ಚಹರೆಯುಳ್ಳ ಯುವಕ ಕಾಣಿಸಿದ್ದಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ:08392258100, ಅಥವಾ 102, ಬಳ್ಳಾರಿ ಎಸ್.ಪಿ ದೂ:0839228400, ಸಿರುಗುಪ್ಪ ಡಿ.ಎಸ್.ಪಿ ದೂ:08392276000, ಪಿ.ಡಿ ಹಳ್ಳಿ ವೃತ್ತದ ಸಿ.ಪಿ.ಐ ದೂ:08392276461, ಪಿ.ಡಿ ಹಳ್ಳಿ ಪೊಲೀಸ್ ಠಾಣೆಯ ದೂ:08392265010, ಅಥವಾ ಪಿ.ಎಸ್.ಐ ಮೊ:9480803052 ಗೆ ಸಂಪರ್ಕಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿತಿನ್ ಗಡ್ಕರಿಯನ್ನು ಕೊಂಡಾಡಿದ ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಕೇಂದ್ರ ರಸ್ತೆ ಹಾಗೂ ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿ ಅವರು ಪಕ್ಷಾತೀತವಾಗಿ ಕೆಲಸ ಮಾಡುವ ಮೂಲಕ ರಾಜ್ಯದ ರಸ್ತೆ ಕಾಮಗಾರಿಗಳಿಗೆ ವೇಗ ಸಿಕ್ಕಿದೆ. ಅವರು ದೇಶದಾದ್ಯಂತ ಮಾಡಿರುವ ರಸ್ತೆ ಅಭಿವೃದ್ಧಿ ಕಾಮಗಾರಿ ಗಮನಿಸಿದರೆ ಅವರಿಗೆ "ರಸ್ತೆಗಳ ಮಹಾರಾಜ್" ಎಂದು ಕರೆಯಬಹುದು ಎಂದು ಸತೀಶ್ ಜಾರಕಿಹೊಳಿ ಅವರು ನಿತಿನ್ ಗಡ್ಕರಿ ಅವರನ್ನು ಕೊಂಡಾಡಿದರು.

ಬೆಳಗಾವಿ ಜಿಲ್ಲೆಯ 1622 ಕೋಟಿ ವೆಚ್ಚದ ಹೊನಗಾ–ಝಾಡಶಹಾಪುರ ಚತುಷ್ಪಥ ರಿಂಗ್ ರಸ್ತೆ, 941 ಕೋಟಿ ವೆಚ್ಚದ ಚಿಕ್ಕೋಡಿ ಬೈಪಾಸ್ ನಿಂದ–ಗೋಟೂರವರೆಗಿನ ಚತುಷ್ಪಥ ಹಾಗೂ ಶಿರಗುಪ್ಪಿಯಿಂದ ಅಂಕಲವರೆಗಿನ 887 ಕೋಟಿ ವೆಚ್ಚದ ರಸ್ತೆ ಅಗಲೀಕರಣ ಸೇರಿದಂತೆ ಒಟ್ಟಾರೆ 13 ಸಾವಿರ ಕೋಟಿ ಮೌಲ್ಯದ 680 ಕಿ.ಮೀ. ಉದ್ದದ 36 ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಗುರುವಾರ(ಫೆ22) ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಸಮಾರಂಭದಲ್ಲಿ ರಾಷ್ಟ್ರ ಸಮರ್ಪಣೆ ಹಾಗೂ ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.

ಗಡ್ಕರಿಗೆ "ರಸ್ತೆಗಳ ಮಹಾರಾಜ್" ಎಂದ ಸತೀಶ್: ನಿತಿನ್ ಗಡ್ಕರಿ ಅವರು ತಮ್ಮ ಕಾರ್ಯಾ ಅವಧಿಯಲ್ಲಿ ಸುಮಾರು 50 ಸಾವಿರ ಲಕ್ಷ ಕೋಟಿಗಳಷ್ಟು ಕೆಲಸ ಮಾಡಿದ್ದಾರೆ. ಆದ್ದರಿಂದ ಇವರಿಗೆ ರಸ್ತೆಗಳ ಮಹಾರಾಜ ಎಂದರೆ ತಪ್ಪಾಗಲಾರದು ಎಂದ ಅವರು, ಮುಂದಿನ ಎರಡು ಮೂರು ವರ್ಷಗಳಲ್ಲಿ ರಾಜ್ಯದ ರಸ್ತೆಗಳು ಸುಧಾರಣೆಯಾಗಬೇಕು. ರಸ್ತೆಗಳನ್ನು ಅಭಿವೃದ್ಧಿಪಡಿಸುವ ಮೂಲಕ ಸಮಗ್ರ ಅಭಿವೃದ್ಧಿಗೊಳಿಸುವುದು ಕೇಂದ್ರ ಹಾಗೂ ರಾಜ್ಯ ಸರಕಾರಗಳ ಕನಸಾಗಿದೆ ಎಂದ ಅವರು, ಕೇಂದ್ರ ರಸ್ತೆ ಸಾರಿಗೆ ಹಾಗೂ ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿ ಅವರು, ಕುಂಠಿತಗೊಂಡಿರುವ 18 ಕಾಮಗಾರಿಗಳನ್ನು ತ್ವರಿತಗೊಳಿಸಲು ಅನುಕೂಲವಾಗುವಂತೆ ರಾಜ್ಯ ಸರಕಾರವು ಅಗತ್ಯ ಕ್ರಮಗಳನ್ನು ತೆಗೆದುಕೊಂಡಿದೆ ಎಂದರು.

ಮುಂದಿನ ಎರಡು ಮೂರು ವರ್ಷಗಳಲ್ಲಿ ರಾಜ್ಯದ ರಸ್ತೆಗಳು ಸುಧಾರಣೆಯಾಗಬೇಕು. ರಸ್ತೆಗಳನ್ನು ಅಭಿವೃದ್ಧಿಪಡಿಸುವ ಮೂಲಕ ಸಮಗ್ರ ಅಭಿವೃದ್ಧಿಗೊಳಿಸುವುದು ಕೇಂದ್ರ ಹಾಗೂ ರಾಜ್ಯ ಸರಕಾರಗಳ ಕನಸಾಗಿದೆ ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಇಲಾಖೆಯ ಸಚಿವರಾದ ಸತೀಶ್ ಜಾರಕಿಹೊಳಿ ಹೇಳಿದರು.

## 24 ಜಿಲ್ಲೆಗಳ 106 ತಾಲೂಕುಗಳಲ್ಲಿ 'ಕೃಷಿ ಭಾಗ್ಯ' ಯೋಜನೆ ಜಾರಿ: ಸಚಿವ ಎನ್. ಚಲುವರಾಯಸ್ವಾಮಿ



ಬೆಂಗಳೂರು: ಕರ್ನಾಟಕದ ಮಳೆಯಾಶ್ರಿತ ಪ್ರದೇಶಗಳಲ್ಲಿ ಸುಸ್ಥಿರ ಕೃಷಿಗೆ ಮಳೆ ನೀರನ್ನು ಒದಗಿಸಿ ಕೃಷಿ ಉತ್ಪಾದನೆ ಹೆಚ್ಚಿಸಲು 2023–24ನೇ ಸಾಲಿನ ಆಯವ್ಯಯದಲ್ಲಿ ರಾಜ್ಯದ 24 ಜಿಲ್ಲೆಗಳ 106 ತಾಲೂಕುಗಳಲ್ಲಿ (2014ರ ಅವಿಭಜಿತ ತಾಲೂಕುಗಳು) ಕೃಷಿ ಭಾಗ್ಯ ಯೋಜನೆ ಮರು ಜಾರಿಗೊಳಿಸಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದರು.

ಕರ್ನಾಟಕ ವಿಧಾನಸಭೆಯಲ್ಲಿ ಶಿರಹಟ್ಟಿ ಶಾಸಕರಾದ ಡಾ. ಚಂದ್ರು ಲಮಾಣಿ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯ ಮಳೆಯಾಶ್ರಿತ ಕೃಷಿ ನೀತಿ, 2014ರ ಅನ್ವಯ 100 ಕೋಟಿ ರೂ.ಗಳ ಅನುದಾನದಲ್ಲಿ ಸದರಿ ಯೋಜನೆಯನ್ನು 2023–24ನೇ ಸಾಲಿನಲ್ಲಿ ಪ್ಯಾಕೇಜ್ ಮಾದರಿಯಲ್ಲಿ (ಕ್ಷೇತ್ರ ಬದು, ಕೃಷಿ ಹೊಂಡ, ಪಾಲಿಥೀನ್ ಹೊದಿಕೆ, ತಂತಿಬೇಲಿ, ಪಂಪ್ ಸೆಟ್, ಸೂಕ್ಷ್ಮ ನೀರಾವರಿ ಘಟಕಗಳು) ಮಾರ್ಗಸೂಚಿ ಹಾಗೂ ಕ್ರಿಯಾ ಯೋಜನೆಯನ್ವಯ ಕಾರ್ಯಕ್ರಮ ಅನುಷ್ಠಾನ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಮುಂಗಾರು 2023ನೇ ಸಾಲಿನ ಬರಪೀಡಿತ ತಾಲೂಕುಗಳ ಪಟ್ಟಿಯಲ್ಲಿ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳು ಸೇರ್ಪಡೆಯಾಗಿದ್ದರೂ ಸಹ 2023–24ನೇ ಸಾಲಿನಲ್ಲಿ ರಾಜ್ಯ ಮಳೆಯಾಶ್ರಿತ ಕೃಷಿ ನೀತಿ, 2014ರ ಅನ್ವಯ ಕೃಷಿ ಭಾಗ್ಯ ಯೋಜನೆ ರಾಜ್ಯದ ಒಣ ಕೃಷಿ ಹವಾಮಾನ ವಲಯಗಳಲ್ಲಿ ಇರುವ ತಾಲೂಕುಗಳಲ್ಲಿ ಮಾತ್ರ ಅನುಷ್ಠಾನ ಮಾಡಲಾಗುತ್ತಿದೆ. ಹಾಗಾಗಿ ಗದಗ ಜಿಲ್ಲೆಯ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕುಗಳು ಒಣ ಕೃಷಿ ಹವಾಮಾನ ವಲಯದಲ್ಲಿ ಇಲ್ಲದಿರುವ ಕಾರಣ ಸೇರ್ಪಡೆ ಮಾಡಲಾಗಿಲ್ಲ ಎಂದು ತಿಳಿಸಿದರು.

2023–24ನೇ ಸಾಲಿನ ಆಯವ್ಯಯದಲ್ಲಿ ಕೃಷಿ ಭಾಗ್ಯ ಯೋಜನೆಯನ್ನು ಮರು ಜಾರಿಗೊಳಿಸಲಾಗಿದ್ದು, ರಾಜ್ಯದ ಮಳೆಯಾಶ್ರಿತ ಕೃಷಿ ನೀತಿ, 2014ರ ಅನ್ವಯ ರಾಜ್ಯದ 24 ಜಿಲ್ಲೆ 106 ತಾಲೂಕುಗಳಲ್ಲಿ (2014ರ ಅವಿಭಜಿತ ತಾಲೂಕುಗಳು) ಅನುಷ್ಠಾನ ಮಾಡಲು ಮಾರ್ಗಸೂಚಿ ಹಾಗೂ ಕ್ರಿಯಾ ಯೋಜನೆಯನ್ನು ಈಗಾಗಲೇ ಜಿಲ್ಲೆಗಳಿಗೆ ನೀಡಲಾಗಿದೆ. ಅದರಂತೆ ಕಾರ್ಯಕ್ರಮ ಅನುಷ್ಠಾನ ಮಾಡಲಾಗುತ್ತಿದೆ ಎಂದು ಹೇಳಿದರು.

## ಸರ್ಕಾರದ ವಿರುದ್ಧ ಸಮರ ಸಾರಿದ ಸಾರಿಗೆ ನೌಕರರು

ಬೆಂಗಳೂರು: ವೇತನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಇಂದು ಸಾರಿಗೆ ನೌಕರರು ಫ್ರೀಡಂಪಾರ್ಕ್‌ನಲ್ಲಿ ಉಪವಾಸ ಸತ್ಯಾಗ್ರಹ ನಡೆಸಲು ಮುಂದಾಗಿದ್ದಾರೆ.

ಸರ್ಕಾರದ ವಿರುದ್ಧ ಸಾರಿಗೆ ಮುಖಂಡ ಅನಂತ ಸುಬ್ಬರಾವ್ ನೇತೃತ್ವದಲ್ಲಿ ಬೆಳಗ್ಗೆ 10:30 ರಿಂದ 5 ಗಂಟೆಯವರೆಗೆ ನೌಕರರ ಉಪವಾಸ ಸತ್ಯಾಗ್ರಹ ನಡೆಯಲಿದೆ. ಸಾರಿಗೆ ನೌಕರರಿಗೆ ಜನವರಿ 1ರಿಂದ ಹೊಸ ಒಪ್ಪಂದದ ಪ್ರಕಾರ ವೇತನ ಪರಿಷ್ಕರಣೆ ಆಗಬೇಕು. ಆದರೆ ಇಲ್ಲಿಯವರೆಗೆ ವೇತನ ಪರಿಷ್ಕರಣೆ ವಿಚಾರವನ್ನು ಸಾರಿಗೆ ನಿಗಮಗಳು ಪ್ರಸ್ತಾಪಿಸಿಲ್ಲ. ಹೀಗಾಗಿ ವೇತನ ಪರಿಷ್ಕರಣೆ ಸೇರಿದಂತೆ ಹಲವು ಬೇಡಿಕೆಗಳನ್ನಿಟ್ಟು ನೌಕರರು ಪ್ರತಿಭಟನೆಗೆ ಸಜ್ಜಾಗಿದ್ದಾರೆ.

**ಸಾರಿಗೆ ನೌಕರರ ಬೇಡಿಕೆಗಳು?**

- ಮೂಲ ವೇತನದ 25% ವೇತನ ಹೆಚ್ಚಿಸಬೇಕು.
- ಎಲೆಕ್ಟ್ರಿಕ್ ಬಸ್‌ಗಳಲ್ಲಿ ಸಾರಿಗೆ ನಿಗಮದ ನೌಕರರನ್ನೇ ಚಾಲಕರಾಗಿ ನೇಮಿಸಿಕೊಳ್ಳುವುದು.
- ನಿವೃತ್ತಿ ನೌಕರರಿಗೆ ಅಂತಿಮವಾಗಿ ಬರಬೇಕಾದ ಹಣ ಕೊಡಬೇಕು ಮತ್ತು 38 ತಿಂಗಳ ವೇತನ ಹೆಚ್ಚಳದ ಬಾಕಿ ನೌಕರರಿಗೆ ನೀಡಬೇಕು.
- ಎಲ್ಲಾ ನಿಗಮಗಳ ನೌಕರರ ಮುಂಬಡ್ತಿಗೆ ಕ್ರಮವಹಿಸುವುದು. ವಿವಿಧ ಭತ್ಯೆಗಳನ್ನ ಐದು ಪಟ್ಟು ಹೆಚ್ಚಿಸುವುದು.
- ಉಚಿತ ಔಷಧಿ ಸೇರಿದಂತೆ ವೈದ್ಯಕೀಯ ಸೌಲಭ್ಯ ನೀಡಬೇಕು.

## ಮೊಮ್ಮಗಳ ಮೇಲೆ ಅಜ್ಜನಿಂದ ಲೈಂಗಿಕ ಕಿರುಕಳ; ಅಪ್ರಾಪ್ತ ಬಾಲಕಿ ಗರ್ಭಿಣಿ

ವಿಜಯವಾಡ: ಮೊಮ್ಮಗಳ ಮೇಲೆ ಅಜ್ಜನೇ ಅತ್ಯಾಚಾರ ನಡೆಸಿರುವ ಘಟನೆ ನೆರೆಯ ಆಂಧ್ರ ಪ್ರದೇಶದಲ್ಲಿ ನಡೆದಿದೆ. ಕೃಷ್ಣಾ ಜಿಲ್ಲೆಯ ಹಳ್ಳಿಯೊಂದರಲ್ಲಿ 14 ವರ್ಷದ ಬಾಲಕಿಯ ಮೇಲೆ ನಾಲ್ಕು ತಿಂಗಳ ಕಾಲ ಅತ್ಯಾಚಾರವೆಸಗಲಾಗಿದ್ದು, ಈಗ ಆಕೆ ಗರ್ಭಿಣಿಯಾಗಿದ್ದಾಳೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ.

ಅಪ್ರಾಪ್ತ ಬಾಲಕಿ ಮೋಪಿದೇವಿ ಗ್ರಾಮದ ಜಿಲ್ಲಾ ಪರಿಷತ್ ಶಾಲೆಯಲ್ಲಿ 9 ನೇ ತರಗತಿಯಲ್ಲಿ ಓದುತ್ತಿದ್ದು, ಆಕೆಯ ಪೋಷಕರು ದಿನಗೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದಾರೆ ಅವನಿಗಡ್ಡಾ ಡಿಎಸ್ಪಿ ಮುರಳೀಧರ್ ಹೇಳಿದ್ದಾರೆ.

ಮಂಗಳವಾರ ಹೊಟ್ಟೆ ನೋವಿನಿಂದ ಬಳಲುತ್ತಿದ್ದ ಬಾಲಕಿಂುನ್ನು ಸ್ಥಳೀಯ ಆಸ್ಪತ್ರೆಗೆ ಕರೆದೊಯ್ದಿದ್ದಾಗ ಪ್ರಕರಣ ಬೆಳಕಿಗೆ ಬಂದಿದೆ.

ವೈದ್ಯರು ಪರೀಕ್ಷಿಸಿದಾಗ ಆಕೆ ಗರ್ಭಿಣಿಯಾಗಿರುವುದು ತಿಳಿದುಬಂದಿದೆ. ಸಂತ್ರಸ್ತೆಯ ಪೋಷಕರ ದೂರಿನ ಆಧಾರದ ಮೇಲೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ತಲೆಮರೆಸಿಕೊಂಡಿರುವ ಆರೋಪಿಗಾಗಿ ಶೋಧ ನಡೆಸುತ್ತಿದ್ದಾರೆ.

## ನೀಲಗಿರಿ ತೋಟದ ಮೇಲಿನ ನಿಷೇಧ ಹಿಂಪಡೆಯುವ ಬಗ್ಗೆ ನಿರ್ಧರಿಸಲು ಉನ್ನತ ಮಟ್ಟದ ಸಮಿತಿ ರಚನೆಗೆ ನಿರ್ಧಾರ



ಬೆಂಗಳೂರು: ನೀಲಗಿರಿ ತೋಟದ ಮೇಲಿನ ನಿಷೇಧವನ್ನು ಹಿಂತೆಗೆದುಕೊಳ್ಳಬೇಕೇ ಅಥವಾ ಭದ್ರಾವತಿ ಎಂಪಿಎಂ ಕಾರ್ಖಾನೆಯ ಪುನಶ್ಚೇತನಕ್ಕೆ ಅನುಕೂಲವಾಗುವಂತೆ ಪರ್ಯಾಯ ಮಾರ್ಗಗಳನ್ನು ಹುಡುಕಬೇಕೆ ಎಂಬುದನ್ನು ನಿರ್ಧರಿಸಲು ರಾಜ್ಯ ಸರ್ಕಾರ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಿದೆ.

ಮೈಸೂರು ಪೇಪರ್ ಮಿಲ್ ಲಿಮಿಟೆಡ್ (ಎಂಪಿಎಂ) ಪುನಶ್ಚೇತನಕ್ಕೆ ಸಂಬಂಧಿಸಿದಂತೆ ಬುಧವಾರ ಕರೆದಿದ್ದ ಸಭೆಯಲ್ಲಿ ಈ ಕುರಿತು ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ.

ವಿಧಾನಸೌಧದ ಕಚೇರಿಯಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂಬಿ ಪಾಟೀಲ್ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು. ಸಭೆಯಲ್ಲಿ ಅರಣ್ಯ ಸಚಿವ ಈಶ್ವರ ಖಂಡ್ರೆ, ಭದ್ರಾವತಿ ಶಾಸಕ ಸಂಗಮೇಶ್ ಉಪಸ್ಥಿತರಿದ್ದರು.

ಸಭೆಯ ನಂತರ ಮಾತನಾಡಿದ ಈಶ್ವರ ಖಂಡ್ರೆ, ಅರಣ್ಯ ಇಲಾಖೆಯಿಂದ ತಜ್ಞರ ಸಮಿತಿ ರಚನೆ ಮಾಡಲಿದ್ದು, ಒಂದು ತಿಂಗಳೊಳಗೆ ಸಮಗ್ರ ವರದಿ ನೀಡುವಂತೆ ಕೋರಲಾಗುವುದು ಎಂದರು.

'ಭದ್ರಾವತಿ ಕಾಗದ ಕಾರ್ಖಾನೆಗೆ 2020ರಲ್ಲಿ ಒಟ್ಟು 20,005 ಹೆಕ್ಟೇರ್ ಅರಣ್ಯ ಭೂಮಿಯನ್ನು ನೀಲಗಿರಿ ಬೆಳೆಯಲು 40 ವರ್ಷಗಳ ಗುತ್ತಿಗೆಗೆ ನೀಡಲಾಗಿದೆ. ಆದರೆ, ಕೇಂದ್ರ ಸರ್ಕಾರದ ಅನುಮತಿ ಇಲ್ಲದೆ ಅರಣ್ಯ ಭೂಮಿ ನೀಡಲು ಸಾಧ್ಯವಿಲ್ಲ. ಮತ್ತೊಂದೆಡೆ, ಅಗತ್ಯವಿರುವ ಕಚ್ಚಾ ವಸ್ತುವನ್ನು ಪಡೆಯದೆ ಕಾರ್ಖಾನೆಯನ್ನು ನಡೆಸಲು ಸಾಧ್ಯವಾಗುವುದಿಲ್ಲ. ಈ ಸಂಕಷ್ಟದ ಪರಿಸ್ಥಿತಿಯನ್ನು ಪರಿಹರಿಸಬೇಕಾಗಿದೆ' ಎಂದು ಹೇಳಿದರು.

ಎಂಪಿಎಂ ಕಾರ್ಯಾಚರಣೆಗೆ ಪ್ರತಿ ವರ್ಷ 10 ಲಕ್ಷ ಟನ್ ಕಚ್ಚಾವಸ್ತುಗಳ ಅಗತ್ಯವಿದ್ದು, ಕಾರ್ಖಾನೆಗೆ ನೀಡಿರುವ ಭೂಮಿಯಿಂದ ಪ್ರಸ್ತುತ ಕೇವಲ ಎರಡು ಲಕ್ಷ ಟನ್ ಮಾತ್ರ ಲಭ್ಯವಾಗುತ್ತಿದೆ. ರಾಜ್ಯದಲ್ಲಿ ನೀಲಗಿರಿ ನೆಡುವುದನ್ನು ನಿಷೇಧಿಸಲಾಗಿದೆ. ಹೀಗಾಗಿ ಕಾರ್ಖಾನೆಯನ್ನು ಪುನಶ್ಚೇತನಗೊಳಿಸಲು ಹೊಸ ಆಯ್ಕೆಯನ್ನು ಕಂಡುಕೊಳ್ಳುವಂತೆ ಸಂಬಂಧಿಸಿದವರಿಗೆ ಸೂಚಿಸಲಾಗಿದೆ ಎಂದು ಅವರು ಹೇಳಿದರು.

# ಹೆದ್ದಾರಿಗಳು ದೇಶದ ಅಭಿವೃದ್ಧಿಗೆ ರಾಜಮಾರ್ಗಗಳು: ನಿತಿನ್ ಗಡ್ಕರಿ

ಮೊದಲನೇ ಪುಟದಿಂದ}

ಮುಂದಿನ ಎರಡು ಮೂರು ವರ್ಷಗಳಲ್ಲಿ ರಾಜ್ಯದ ರಸ್ತೆಗಳು ಸುಧಾರಣೆಯಾಗಬೇಕು. ರಸ್ತೆಗಳನ್ನು ಅಭಿವೃದ್ಧಿಪಡಿಸುವ ಮೂಲಕ ಸಮಗ್ರ ಅಭಿವೃದ್ಧಿಗೊಳಿಸುವುದು ಕೇಂದ್ರ ಹಾಗೂ ರಾಜ್ಯ ಸರಕಾರಗಳ ಕನಸಾಗಿದೆ ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಇಲಾಖೆಯ ಸಚಿವರಾದ ಸತೀಶ್ ಜಾರಕಿಹೊಳಿ ಹೇಳಿದರು.

ಕೇಂದ್ರ ರಸ್ತೆ ಸಾರಿಗೆ ಹಾಗೂ ಹೆದ್ದಾರಿ ಸಚಿವರಾದ ನಿತಿನ್ ಗಡ್ಕರಿ ಅವರು, ಕುಂಠಿತಗೊಂಡಿರುವ 18 ಕಾಮಗಾರಿಗಳನ್ನು ತ್ವರಿತಗೊಳಿಸಲು ಅನುಕೂಲವಾಗುವಂತೆ ರಾಜ್ಯ ಸರಕಾರವು ಅಗತ್ಯ ಕ್ರಮಗಳನ್ನು ತೆಗೆದುಕೊಂಡಿದೆ. ಗಡ್ಕರಿ ಅವರು ಪಕ್ಷಾತೀತವಾಗಿ ಕೆಲಸ ಮಾಡುವ ಮೂಲಕ ರಾಜ್ಯದ ರಸ್ತೆ ಕಾಮಗಾರಿಗಳಿಗೆ ವೇಗ ಸಿಕ್ಕಿದೆ. ಅವರು ದೇಶದಾದ್ಯಂತ ಮಾಡಿರುವ ರಸ್ತೆ ಅಭಿವೃದ್ಧಿ ಕಾಮಗಾರಿ ಗಮನಿಸಿದರೆ ಅವರಿಗೆ "ರಸ್ತೆಗಳ ಮಹಾರಾಜ್" ಎಂದು ಕರೆಯಬಹುದು ಎಂದು ಸತೀಶ್ ಜಾರಕಿಹೊಳಿ ಹೇಳಿದರು. ಬೆಳಗಾವಿ ಮೇಲ್ಸೇತುವೆ, ಗೋಕಾಕ ಫಾಲ್ಸ್ ಪ್ರವಾಸಿತಾಣವಾಗಿ ಅಭಿವೃದ್ಧಿಪಡಿಸುವುದಾಗಿ ಅವರು ಈಗಾಗಲೇ ಭರವಸೆಯನ್ನು ನೀಡಿರುತ್ತಾರೆ. ರಾಜ್ಯದ ಎಲ್ಲ ಯೋಜನೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಮುಂಬರುವ ದಿನಗಳಲ್ಲೂ ಕೂಡ ಇದೇ ರೀತಿ ಸಹಕಾರ ನೀಡುವ ಮೂಲಕ ಅಭಿವೃದ್ಧಿ ವೇಗಕ್ಕೆ ಕೈಜೋಡಿಸಲಿದ್ದಾರೆ ಎಂದು ಸತೀಶ್ ಜಾರಕಿಹೊಳಿ ವಿಶ್ವಾಸ ವ್ಯಕ್ತಪಡಿಸಿದರು.

ಕೇವಲ ಬೆಳಗಾವಿ ಜಿಲ್ಲೆಯೊಂದರಲ್ಲೇ 4237 ಕೋಟಿ ರೂಪಾಯಿ ವೆಚ್ಚದ ರಸ್ತೆ ಕಾಮಗಾರಿಗಳಿಗೆ ಚಾಲನೆ ನೀಡಲಾಗುತ್ತಿದೆ ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಹೇಳಿದರು. ಜತ್ ಜಾಂಬೋಟಿ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಬೇಕು; ರಾಜಹಂಸಗಡ ಕೋಟೆಯನ್ನು ಪ್ರವಾಸಿತಾಣವಾಗಿ ಅಭಿವೃದ್ಧಿಪಡಿಸಲು ಅನುಕೂಲವಾಗುವಂತೆ ಕೇಬಲ್ ಕಾರ್ ಸೌಕರ್ಯ ಕಲ್ಪಿಸಬೇಕು ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ಅವರು ಮನವಿ ಮಾಡಿಕೊಂಡರು.

ಸಂಸದೆ ಮಂಗಲ ಅಂಗಡಿ ಮಾತನಾಡಿ, ಉತ್ತರ ಕರ್ನಾಟಕದ ಅಭಿವೃದ್ಧಿಗೆ ಪೂರಕವಾಗಿ ಸಾವಿರಾರು ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳನ್ನು ಮಂಜೂರು ಮಾಡಿದ ಪ್ರಧಾನಮಂತ್ರಿಗಳು ಹಾಗೂ ಕೇಂದ್ರ ರಸ್ತೆ ಸಾರಿಗೆ ಹಾಗೂ ಹೆದ್ದಾರಿ ಸಚಿವರಿಗೆ ಕೃತಜ್ಞತೆ ಸಲ್ಲಿಸಿದರು. ಬೆಳಗಾವಿ ರಿಂಗ್ ರಸ್ತೆ ಮಾಜಿ ಕೇಂದ್ರ ಸಚಿವರಾದ ಸುರೇಶ್ ಅಂಗಡಿ ಅವರ ಕನಸಾಗಿತ್ತು. ಧಾರವಾಡ–ಸವದತ್ತಿ–ಯರಗಟ್ಟಿ–ಮುಧೋಳ ರಾಜ್ಯ ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸಬೇಕು ಎಂದು ಮಂಗಲ ಅಂಗಡಿ ಮನವಿ ಮಾಡಿಕೊಂಡರು.

ಸಂಸದರಾದ ಅಣ್ಣಾಸಾಹೇಬ್ ಜೊಲ್ಲೆ, ಮಂಗಲ ಅಂಗಡಿ ಪಿ.ಸಿ.ಗದ್ದಿಗೌಡರ, ಸಂಗಣ್ಣ ಕರಡಿ, ರಾಜಾ ಅಮರೇಶ್ವರ ನಾಯಕ, ಶಾಸಕರಾದ ಅಭಯ್ ಪಾಟೀಲ, ವಿಠ್ಠಲ ಹಲಗೇಕರ, ನವದೆಹಲಿ ವಿಶೇಷ ಪ್ರತಿನಿಧಿ ಪ್ರಕಾಶ್ ಹುಕ್ಕೇರಿ, ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಪೊಲೀಸ್ ಆಯುಕ್ತರಾದ ಎಸ್. ಎನ್.ಸಿದ್ದರಾಮಪ್ಪ, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಮತ್ತಿತರರು ಉಪಸ್ಥಿತರಿದ್ದರು.

## ಬಸ್ ಅಡ್ಡಗಟ್ಟಿ ಅಪ್ರಾಪ್ತೆಯ ಕತ್ತು ಕೊಯ್ದ ದುಷ್ಕರ್ಮಿಗಳು



ಕಲಬುರಗಿ: ಬಸ್ ಅಡ್ಡಗಟ್ಟಿ ದುಷ್ಕರ್ಮಿಗಳು ಅಪ್ರಾಪ್ತೆಯ ಕತ್ತು ಕೊಯ್ದು ಕೊಲೆ ಮಾಡಲು ಯತ್ನಿಸಿದ ಘಟನೆ ಕಲಬುರಗಿಯಲ್ಲಿ ಬೆಳಕಿಗೆ ಬಂದಿದೆ.

ಕಲಬುರಗಿ ಜಿಲ್ಲೆಯ ಅಟ್ಟೂರು ಕ್ರಾಸ್ ಬಳಿ ಈ ಘಟನೆ ನಡೆದಿದೆ. ಅಪ್ರಾಪ್ತ ಬಾಲಕಿ ಬೆಳಮಗಿ ಗ್ರಾಮದಿಂದ ವಿಕೆ ಸಲಗರದ ಗ್ರಾಮಕ್ಕೆ ಬಸ್ ನಲ್ಲಿ ಬರುತ್ತಿದ್ದಳು.

ಈ ವೇಳೆ ಬಸ್ ಅಡ್ಡಗಟ್ಟಿದ ಯುವಕರ ಗುಂಪು ಬಾಲಕಿಯ ಕತ್ತು ಕೊಯ್ದು ಕೊಲೆ ಮಾಡಲು ಯತ್ನಿಸಿದ್ದಾರೆ. ಗಂಭೀರವಾಗಿ ಗಾಯಗೊಂಡ ಬಾಲಕಿಯನ್ನು ಕಲಬುರಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಸದ್ಯ, ಬಾಲಕಿಯ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದು ಬಂದಿದೆ. ನರೋಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ಸಾರಾಯಿ ಸೇವಿಸದಂತೆ ಬುದ್ದಿವಾದ: ನೊಂದು ನೇಣಿಗೆ ಶರಣಾದ ಪುತ್ರ



ರಾಯಚೂರು: ಜಿಲ್ಲೆಯ ಮಾನ್ವಿ ಪಟ್ಟಣದಲ್ಲಿ ಪೋಷಕರ ಬುದ್ದಿಮಾತಿಗೆ ಮನನೊಂದು ಪುತ್ರ ನೇಣಿಗೆ ಶರಣಾಗಿರುವ ಘಟನೆ ನಡೆದಿದೆ. ನಿತ್ಯ ಮದ್ಯಪಾನ ಮಾಡದಂತೆ ಬುದ್ದಿಹೇಳಿದ್ದಕ್ಕೆ ಯುವಕ ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

24 ವರ್ಷದ ಆದರ್ಶ ಆತ್ಮಹತ್ಯೆಗೆ ಶರಣಾದ ಯುವಕ. ನಿತ್ಯ ಮದ್ಯಪಾನ ಸೇವಿಸಿ ಮನೆಗೆ ಬರುತ್ತಿದ್ದ ಮಗನ ವರ್ತನೆಯಿಂದ ಪೋಷಕರು ಬೇಸತ್ತಿದ್ದರು. ಇದೇ ವಿಚಾರಕ್ಕೆ ಬೈದು ಬುದ್ದಿವಾದ ಹೇಳಿದ್ದರು. ಬುದ್ದಿವಾದವನ್ನೇ ಅವಮಾನ ಎಂದು ತಿಳಿದು ಆತ್ಮಹತ್ಯೆಗೆ ಶರಣಾಗಿದ್ದಾನೆ.

ಮನೆಯ ಬಾತ್ ರೂಮ್‌ನಲ್ಲಿದ್ದ ಕಬ್ಬಿಣದ ಪೈಪ್‌ಗೆ ಹಗ್ಗ ಹಾಕಿ ನೇಣುಬಿಗಿದುಕೊಂಡು ಸಾವನ್ನಪ್ಪಿದ್ದಾನೆ. ಮಾನ್ವಿ ಪಟ್ಟಣದಲ್ಲಿ ಹೇರ್ ಸಲೂನ್ ನಡೆಸುತ್ತಿದ್ದ ಆದರ್ಶ ಮದ್ಯವ್ಯಸನಿಯಾಗಿದ್ದ. ಮಾನ್ವಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಾರ್ವಜನಿಕರ ಗಮನಕ್ಕೆ

ಬೆಳಗಾವಿ: ಇತ್ತೀಚೆಗೆ ಬೆಳಗಾವಿ ಜಿಲ್ಲೆಯ ನಗರದಲ್ಲಿ ನೀರು ಸರಬರಾಜು ಯೋಜನೆ ಹೆಸರು ಹೇಳಿಕೊಂಡು ನಳ ಪರಿಶೀಲನೆ, ಬಿಲ್ ಪರಿಶೀಲನೆ ಮಾಡಲು ಬಂದಿರುವುದಾಗಿ ಹೇಳಿ, ಮನೆಯಲ್ಲಿ ಒಬ್ಬರೇ ಮಹಿಳೆಯಿರುವಾಗ ಮನೆಗಳಿಗೆ ಭೇಟಿ ನೀಡಿ, ಕಳವು ಮಾಡುವ ತಂಡಗಳ ಕುರಿತು ಮಾಹಿತಿ ಕಂಡು ಬಂದಿರುತ್ತದೆ.

ಆದ್ದರಿಂದ ಸಾರ್ವಜನಿಕರು ಹೀಗೆ ಹೇಳಿಕೊಂಡು ಬರುವ ಜನರಿಗೆ ಮೊದಲು ಅವರ ಗುರುತಿನ ಚೀಟಿ ಪರಿಶೀಲಿಸಿ. ಅವರನ್ನು ಮನೆಯ ಗೇಟ ಹತ್ತಿರವೆ ನಿಲ್ಲಿಸಿ ವಿಚಾರಿಕೊಳ್ಳಬೇಕು. ಸಂಶಯ ಕಂಡು ಬಂದಲ್ಲಿ ದೂರವಾಣಿ 9886778294, 6263876592 ಸಂಖ್ಯೆಗಳಿಗೆ ಕರೆ ಮಾಡಿ ಖಾತ್ರಿ ಪಡಿಸಿಕೊಳ್ಳಬೇಕು ಎಂದು ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೃದ್ಧ ದಂಪತಿ ನೇಣಿಗೆ ಶರಣು



ಬೆಂಗಳೂರು: ಸಿಲಿಕಾನ್ ಸಿಟಿಯಲ್ಲಿ ವೃದ್ಧ ದಂಪತಿ ನೇಣಿಗೆ ಶರಣಾದ ಘಟನೆ ನಡೆದಿದೆ.

ಕೃಷ್ಣ ನಾಯ್ಡು (88) ಮತ್ತು ಸರೋಜಮ್ಮ (72) ಆತ್ಮಹತ್ಯೆ ಮಾಡಿಕೊಂಡ ವೃದ್ದ ದಂಪತಿ. ಬೆಳಗ್ಗೆ 5.30ರ ಸುಮಾರಿಗೆ ಸ್ಥಳೀಯರು ಬಂದು ಬಾಗಿಲು ಬಡಿದಾಗ ಘಟನೆ ಬೆಳಕಿಗೆ ಬಂದಿದೆ.

ಮೂರು ಅಂತಸ್ತಿನ ಕಟ್ಟಡದಲ್ಲಿ ಮಗ ಮೊದಲ ಮಹಡಿಯಲ್ಲಿ ವಾಸವಿದ್ದು ಎರಡು ಮಹಡಿಯಲ್ಲಿರೋ ಮನೆಗಳು ಬಾಡಿಗೆ ಕೊಡಲಾಗಿದ್ದು, ಟೆರೇಸ್ ಮೇಲೆ ಸಣ್ಣ ಮನೆಯಲ್ಲಿ ವೃದ್ಧದಂಪತಿ ವಾಸವಾಗಿರುತ್ತಾರೆ.

ಬುಧವಾರ ರಾತ್ರಿ ವೃದ್ಧದಂಪತಿ ಬಟ್ಟೆಗಳಿಂದ ಮನೆಯಲ್ಲಿರೋ ಕಿಟಕಿಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ದಂಪತಿ ಮಗ ಅಶೋಕ್ ಮುಂಜಾನೆ 5.30 ಸುಮಾರಿಗೆ ಹೋಗಿ ಬಾಗಿಲು ಬಡಿದಾಗ ಬಾಗಿಲು ತಂದೆ ತಾಯಿ ತೆಗೆದಿಲ್ಲ. ಅನುಮಾನ ಬಂದು ಬಾಗಿಲು ಮುರಿದು ಒಳಗಡೆ ನೋಡಿದಾಗ ತಂದೆ- ತಾಯಿ ಇಬ್ಬರೂ ನೇಣು ಹಾಕಿಕೊಂಡಿರೋ ವಿಚಾರ ಬೆಳಕಿಗೆ ಬಂದಿದೆ .

ಸದ್ಯ ಘಟನೆ ಬಗ್ಗೆ ದಂಪತಿ ಮಗ ಅಶೋಕ್ ಅವರಿಂದ ಪೊಲೀಸರು ಹೇಳಿಕೆ ಪಡೆದಿದ್ದು, ಆತ್ಮಹತ್ಯೆ ಪ್ರಕರಣ ದಾಖಲಿಸಿಕೊಂಡಿದ್ದಾರೆ. ದಂಪತಿ ಆತ್ಮಹತ್ಯೆ ವಿಚಾರದಲ್ಲಿ ಒಂದಷ್ಟು ಅನುಮಾನ ವ್ಯಕ್ತವಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಆಸ್ತಿ ವಿಚಾರಕ್ಕೆ ವೃದ್ಧದಂಪತಿ ಹಾಗೂ ಮಗನ ನಡುವೆ ಏನಾದರೂ ವೈಷಮ್ಯ ಇತ್ತಾ ಅನ್ನೋದರ ಬಗ್ಗೆ ಪೊಲೀಸರು ತನಿಖೆ ಮಾಡುತ್ತಿದ್ದಾರೆ.

# ಶಿಕ್ಷಣ ಸಮಾಜದ ಬೆಳವಣಿಗೆಗೆ ಉಪಯುಕ್ತವಾಗಿರಲಿ: ರುದ್ರೇಶ್

ಬಳ್ಳಾರಿ: ನಾವು ಕಲಿಯುವ ಶಿಕ್ಷಣವು ನಮಗೆ ಮಾತ್ರ ಸೀಮಿತವಾಗದೇ, ಸಮಾಜದ ಬೆಳವಣಿಗೆಗೆ ಉಪಯುಕ್ತವಾಗಬೇಕು ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವ ವಿದ್ಯಾಲಯದ ಕುಲಸಚಿವ ರುದ್ರೇಶ್. ಎಸ್.ಎನ್ ಅವರು ಅಭಿಪ್ರಾಯ ಪಟ್ಟರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಡಾ. ಬಿ.ಆರ್. ಅಂಬೇಡ್ಕರ್ ಸಭಾಂಗಣದಲ್ಲಿ ರಸಾಯನಶಾಸ್ತ್ರ ವಿಭಾಗ ಹಾಗೂ ರಾಯಲ್ ಸೊಸೈಟಿ ಆಫ್ ಕೆಮಿಸ್ಟ್ರಿ (ಯು.ಕೆ) ಮತ್ತು ಆರ್‌ಎಸ್‌ಎಲ್ ಡೆಕ್ಕನ್ ಸ್ಥಳೀಯ ವಿಭಾಗ, ಭಾರತ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ಏರ್ಪಡಿಸಿದ್ದ "ಸ್ಪೆಕ್ಟ್ರೋಸ್ಕೋಪಿ ಮತ್ತು ಅನ್ವಯಿಕೆಯ ಇತ್ತೀಚಿನ ಪ್ರವೃತ್ತಿಗಳು" ಕುರಿತು ಒಂದು ದಿನದ ವಿಶೇಷ ವಿಚಾರ ಸಂಕಿರಣ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.




ವಿದ್ಯಾರ್ಥಿಗಳು ಒಂದು ವಿಷಯದ ಸಂಶೋಧನೆಯಲ್ಲಿ ನಿರತವಾಗಿರದೇ, ಬಹುಶಿಸ್ತಿಯ ಸಂಶೋಧನೆಗಳಿಗೆ ಒತ್ತು ನೀಡಬೇಕು. ಇದರಿಂದ ಸಮಾಜ, ಜನಾಂಗ ಹಾಗೂ ದೇಶದ ಬೆಳವಣಿಗೆಗೆ ಸಂಶೋಧನೆಗಳು ಪೂರಕವಾಗುತ್ತದೆ ಎಂದು ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣ ಮಾಡುವಲ್ಲಿ ನಿಯಮಿತವಾಗಿ ಉಪಯುಕ್ತ ಕಾರ್ಯಕ್ರಮಗಳನ್ನು ರಸಾಯನಶಾಸ್ತ್ರ ವಿಭಾಗವು ಆಯೋಜಿಸುತ್ತಿದೆ ಎಂದು ವಿಭಾಗದ ಕಾರ್ಯಚಟುವಟಿಕೆಗಳನ್ನು ಶ್ಲಾಘಿಸಿದರು.

ವಿವಿಯ ವಿತ್ತಾಧಿಕಾರಿಗಳಾದ ಪ್ರೊ.ಸದ್ಯೋಜಾತಪ್ಪ ಮಾತನಾಡಿ, ದೇಶವು ವಿಜ್ಞಾನ ಮತ್ತು ತಂತ್ರಜ್ಞಾನದ ಮೂಲಕ ವಿಶ್ವದ ಗಮನ ಸೆಳೆಯುತ್ತಿದೆ. ಶಾಲಾ ಹಂತದಿಂದ ಮೌಲ್ಯಾಧಾರಿತ ಶಿಕ್ಷಣವನ್ನು ಮಕ್ಕಳಿಗೆ ಒದಗಿಸಿದಲ್ಲಿ ಮಾತ್ರ ಮುಂದೆ ಅವರು ಉನ್ನತ ವ್ಯಾಸಂಗ ಮಾಡುವಾಗ ಹೊಸ ಆವಿಷ್ಕಾರಗಳ ಬಗ್ಗೆ ಯೋಚಿಸಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯ ಪಟ್ಟರು.

ರಾಯಲ್ ಸೊಸೈಟಿ ಆಫ್ ಕಮಿಸ್ಟ್ರಿ (ಯು.ಕೆ) ಮತ್ತು ಸ್ಥಳೀಯ ವಿಭಾಗ ಡೆಕ್ಕನ್ನ ಉಪಾಧ್ಯಕ್ಷ ಡಾ.ಸಿ.ವಿ ಯಳಮಗ್ಗದ ಅವರು ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಮಾತನಾಡಿ, ಪ್ರಸುತ್ತ ದಿನಗಳಲ್ಲಿ ಮಾಲಿನ್ಯ, ಜಾಗತಿಕ ತಾಪಮಾನ ಮುಂತಾದ ಹಲವಾರು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಯುವ ವಿಜ್ಞಾನಿಗಳು ಸ್ಪೆಕ್ಟ್ರೋಸ್ಕೋಪಿ ಹಾಗೂ ಇದರ ಅನ್ವಯಿಕ ಮಾರ್ಗಗಳನ್ನು ಬಳಕೆ ಮಾಡಬೇಕು ಎಂದು ತಿಳಿಸಿದರು.

ರಾಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ.ಕೆ.ಎಸ್.ಲೋಕೇಶ್ ಅವರು ಮಾತನಾಡಿ, ಸ್ಪೆಕ್ಟ್ರೋಸ್ಕೋಪಿ ಮತ್ತು ಅದರ ಅನ್ವಯಿಕಗಳ ಪ್ರಾಮುಖ್ಯತೆ ಕುರಿತು ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು.

ವಿಚಾರ ಸಂಕಿರಣದ ಸಂಚಾಲಕರಾದ ಡಾ. ಅರುಣ ಕುಮಾರ ಲಗಶೆಟ್ಟಿ ಅತಿಥಿಗಳನ್ನು ಸ್ವಾಗತಿಸಿದರು. ವಿಭಾಗದ ಮುಖ್ಯಸ್ಥರಾದ ಪ್ರೊ.ಕೆ.ಎಸ್.ಲೋಕೇಶ್ ವಂದಿಸಿದರು.

ಈ ವೇಳೆ ರಾಯಲ್ ಸೊಸೈಟಿ ಆಫ್ ಕೆಢಮಿಸ್ಟ್ರಿ (ಯು.ಕೆ) ಮತ್ತು ಸ್ಥಳೀಯ ವಿಭಾಗ ಡೆಕ್ಕನ್ನ ಕಾರ್ಯಕಾರಿ ಸದಸ್ಯರು, ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಮಕ್ಕಳಲ್ಲಿ ಪೌಷ್ಟಿಕಾಂಶ ಬೆಳವಣಿಗೆಗೆ ರಾಗಿ ಮಾಲ್ಟ್ ಸಹಕಾರಿ: ಮೇಯರ್ ಬಿ.ಶ್ವೇತ



ಬಳ್ಳಾರಿ: ಮಕ್ಕಳಲ್ಲಿ ಅಪೌಷ್ಟಿಕತೆ ಹೋಗಲಾಡಿಸಲು ಮತ್ತು ಅವರ ಆರೋಗ್ಯವು ಪೌಷ್ಟಿಕಾಂಶಯುತವಾಗಿ ಬೆಳೆಯಲು ರಾಗಿ ಮಾಲ್ಟ್ ಸಹಕಾರಿಯಾಗಿದೆ ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಬಿ.ಶ್ವೇತ ಅವರು ಹೇಳಿದರು.

ನಗರದ ಹವಂಭಾವಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಪಿ.ಎಂ.ಪೋಷಣ್ ಯೋಜನೆ ಕಾರ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯಡಿ ಹಮ್ಮಿಕೊಂಡಿದ್ದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿನ 1 ರಿಂದ 10 ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳಿಗೆ ಸಾಯಿ ಶೂರ್ ರಾಗಿ ಹೆಲ್ತ್ ಮಿಕ್ಸ್ ವಿತರಣೆಯ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಗಿಯಲ್ಲಿ ಕಬ್ಬಿಣಾಂಶ ಹೇರಳವಾಗಿರುವುದರಿಂದ ಮಕ್ಕಳ ದೇಹದ ತೂಕವನ್ನು ನಿಯಂತ್ರಿಸಲು ಸಹಕಾರಿಯಾಗುತ್ತದೆ. ಮುಖ್ಯವಾಗಿ ಬಡ ಮಕ್ಕಳಲ್ಲಿ ರಕ್ತಹೀನತೆ, ಮೂಳೆ ಗಟ್ಟಿಗೊಳಿಸುವಿಕೆ, ಅಪೌಷ್ಟಿಕತೆ ನಿವಾರಣೆಗೆ ಅನುಕೂಲವಾಗಲಿದೆ ಎಂದರು.

ಮಕ್ಕಳ ಆರೋಗ್ಯ ಬೆಳವಣಿಗೆಗೆ ಪೂರಕವಾಗಿ ರಾಜ್ಯ ಸರ್ಕಾರವು 1 ರಿಂದ 10 ನೇ ತರಗತಿಯ ಎಲ್ಲಾ ಮಕ್ಕಳಿಗೆ ವಾರದಲ್ಲಿ ಮೂರು ದಿನ ರಾಗಿ ಹೆಲ್ತ್ ಮಿಕ್ಸ್ ವಿತರಣೆ ಮಾಡಲು ನಿರ್ಧರಿಸಿದ್ದು, ಇದರಿಂದ ಮಕ್ಕಳಲ್ಲಿ ಇನ್ನಷ್ಟು ಪೌಷ್ಟಿಕತೆ ಹೆಚ್ಚುತ್ತದೆ ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಉಮಾದೇವಿ ಅವರು ಮಾತನಾಡಿ, ಆರೋಗ್ಯವಂತ ಮಗು, ದೇಶದ ಆಸ್ತಿಯಾಗಿ ಬೆಳೆಯುತ್ತಾನೆ. ಹೀಗಾಗಿ ಮಕ್ಕಳು ಆರೋಗ್ಯವಂತರಾಗಿ ಬೆಳೆಯಲು ರಾಜ್ಯ ಸರ್ಕಾರವು ನೂತನ ಕಾರ್ಯಕ್ರಮ ಜಾರಿಗೊಳಿಸಿರುವುದು ಖುಷಿಯ ಸಂಗತಿಯಾಗಿದೆ ಎಂದರು.


ಡಯಟ್ನ ಪ್ರಾಂಶುಪಾಲರಾದ ಹನುಮಕ್ಕ ಅವರು ಮಾತನಾಡಿ, ನಾವು ಅಭ್ಯಾಸ ಮಾಡುವ ಸಮಯದಲ್ಲಿ ಯಾವುದೇ ರೀತಿಯ ಸೌಲಭ್ಯ ಇರುತ್ತಿದ್ದಿಲ್ಲ. ಈಗಿನ ಸಮಯದಲ್ಲಿ ಮಕ್ಕಳ ಆರೋಗ್ಯ ಪೂರಕವಾಗಿ ಎಲ್ಲಾ ಸೌಲಭ್ಯಗಳನ್ನು ನೀಡುತ್ತಿದೆ ಎಂದರು.

ಮಕ್ಕಳ ತೂಕ ಬೆಳವಣಿಗೆಗೆ ಹಾಗೂ ಮಾನಸಿಕ, ದೈಹಿಕ ಆರೋಗ್ಯಕ್ಕಾಗಿ ರಾಗಿ ಮಾಲ್ಟ್ ಉಪಯುಕ್ತವಾಗಿದೆ. ಉತ್ತಮ ಪೌಷ್ಠಿಕಾಂಶ ಆರೋಗ್ಯದಿಂದ ಮಾತ್ರ ಉತ್ತಮ ಶಿಕ್ಷಣ ಪಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗಣ್ಯರು ಮಕ್ಕಳಿಗೆ ರಾಗಿ ಮಾಲ್ಟ್ ವಿತರಿಸಿದರು. ಮಕ್ಕಳೂ ಖುಷಿಯಿಂದಲೇ ರಾಗಿ ಮಾಲ್ಟ್ ಸವಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಸದಸ್ಯರಾದ ಕಲ್ಪನಾ, ಜಿಪಂ ಅಕ್ಷರ ದಾಸೋಹದ ಶಿಕ್ಷಣಾಧಿಕಾರಿ ಶೇಖರ್ ಹೊರಪೇಟೆ, ಹವಂಭಾವಿಯ ಸರ್ಕಾರಿ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಜಿಲ್ಲಾ ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷರಾದ ನಿಂಗಪ್ಪ, ಎಸ್ಡಿಎಂಸಿ ಅಧ್ಯಕ್ಷರಾದ ನಾಗಪ್ಪ, ಉಪಾಧ್ಯಕ್ಷರಾದ ನೇತಿ ರಘುರಾಮ್ ಸೇರಿದಂತೆ ಶಾಲಾ ಶಿಕ್ಷಕರು, ಪೇಷಕರು ಹಾಗೂ ಮಕ್ಕಳು ಉಪಸ್ಥಿತರಿದ್ದರು.

## ಶಿಕ್ಷಕಿ ಕೊಲೆ ಪ್ರಕರಣಕ್ಕೆ ರೋಚಕ ತಿರುವು : ಆರೋಪಿ ಬಂಧನ



ಮಂಡ್ಯ: ಭಾರೀ ಕುತೂಹಲ ಕೆರಳಿದ್ದ ಮಂಡ್ಯ ಜಿಲ್ಲೆಯ ಮೇಲುಕೋಟೆಯ ವಿವಾಹಿತ ಶಿಕ್ಷಕಿ ದೀಪಿಕಾ (21) ಕೊಲೆ ಪ್ರಕರಣದಲ್ಲಿ ಪೊಲೀಸರಿಗೆ ಪ್ರಮುಖವಾಗಿ ಬೇಕಾಗಿದ್ದ ನಿತೀಶ್ (21) ಎಂಬಾತನನ್ನು ಬಂಧಿಸುವಲ್ಲಿ ಮಂಡ್ಯ ಪೊಲೀಸರು ಯಶಸ್ವಿಯಾಗಿದ್ದಾರೆ.

ಈತನ ಮೇಲೆ ದೀಪಿಕಾರವರ ಕೊಲೆ ಆರೋಪ ಕೇಳಿಬಂದಿತ್ತು. ತಲೆಮರೆಸಿಕೊಂಡಿದ್ದ ಆತನನ್ನು ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಬಂಧಿಸಿದ್ದಾರೆ.

ದೀಪಿಕಾರವರ ಕೊಲೆಯಾಗಿ ಎರಡು ದಿನಗಳ ನಂತರ ಅವರ ಶವ ಪೊಲೀಸರಿಗೆ ಸಿಕ್ಕಿತ್ತು. ಇತ್ತ, ಅದೇ ದಿನ ನಿತೀಶ್ ಗ್ರಾಮದಿಂದ ನಾಪತ್ತೆಯಾಗಿದ್ದ. ದೀಪಿಕಾರಿಗೆ ಕೆಲವಾರು ವರ್ಷಗಳಿಂದ ಪರಿಚಯವಾಗಿದ್ದರಿಂದ ಈತನ ಮೇಲೆ ಅನುಮಾನಗಳು ಬಂದಿದ್ದವು. ನಾಪತ್ತೆಯಾಗುವ ಮೊದಲು ನಾಟಕವಾಡಿದ್ದ ಆತ, ದೀಪಿಕಾ ನಾಪತ್ತೆಯಾಗಿ ಆಕೆಯ ಶವ ಪತ್ತೆಯಾದ ನಡುವಿನ 2 ದಿನದಲ್ಲಿ ಒಮ್ಮೆ ದೀಪಿಕಾರ ತಂದೆಗೆ ಫೋನ್ ಮಾಡಿದ್ದ, 'ಅಕ್ಕ ಪತ್ತೆಯಾದರಾ' ಎಂದು ಕೇಳಿ, ಸಂತಾಪ ಸೂಚಿಸುವ ನಾಟಕವಾಡಿದ್ದ ಎಂದು ಹೇಳಲಾಗಿದೆ.

## ಗೋಕಾಕ: ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಮನೆ ಸುಟ್ಟು ಭಸ್ಮ ಲಕ್ಷಾಂತರ ಮೌಲ್ಯದ ಚಿನ್ನಾಭರಣ, ನಗದು ಬೆಂಕಿಗಾಹುತಿ





ಗೋಕಾಕ: ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಮನೆ ಸುಟ್ಟು ಭಸ್ಮಗೊಂಡಿರುವ ಘಟನೆ ತಾಲೂಕಿನ ಸೋಳಸುರ ಗ್ರಾಮದ ವ್ಯಾಪ್ತಿಯ ಸಿಂಗ್ಳಾಪುರ ಜನತ ಸಪ್ಲಾಟ್‌ನಲ್ಲಿ ನಡೆದಿದೆ. ಲಕ್ಷಾಂತರ ಮೌಲ್ಯದ ಚಿನ್ನಾಭರಣ ಹಾಗೂ ನಗದು ಬೆಂಕಿಗಾಹುತಿ ಆಗಿದೆ. ಮನೆ ಮಾಲೀಕರು ಗಂಭೀರಗಾಯಗೊಂಡಿದ್ದು ಆಸ್ಪತ್ರೆಗೆ ದಾಖಲಿಸಲಾಗಿದೆ.

ಮನೆ ಮಾಲೀಕರಾದ ಅವರು ಹುಸೇನಸಾಬ್ ಮೇಹಬುಬ್ ಸಾಬ್ ಪೀರಜಾದೆ ಅವರು ಇಂದು ಮುಂಜಾನೆ ಮನೆ ಕೆಲಸ ಮಾಡುತ್ತಿರುವುವಾಗ ಏಕಾಏಕಿ ಹೆಸ್ಕಾಂ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಗೊಂಡು ಮನೆಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಅದನ್ನು ನಿಂದಿಸಲು ಹೋದ ಹುಸೇನಸಾಬ್ ಅವರಿಗೆ ಗಂಭೀರವಾಗಿದೆ. ಅದೃಷ್ಟವಶಾತ್ ಮನೆಯಲ್ಲಿದ್ದ ಪತ್ನಿ, ಮಗ, ಸೊಸೆಯಂದಿರು, ಮೊಮ್ಮಕ್ಕಳು ಪ್ರಾಣಾಪಾಯದಿಂದ ಪಾರಾಯಾಗಿದ್ದಾರೆ ಎಂದು ತಿಳಿದು ಬಂದಿದೆ.

ಸ್ಥಳಕ್ಕೆ ಅಗ್ನಿ ಶಾಮಕ ದಳದ ಸಿಬ್ಬಂದಿ ದಾವಿಸಿ ಬೆಂಕಿ ನಿಂಧಿಸುವ ಕಾರ್ಯವನ್ನು ಮಾಡಲಾಗಿದೆ. ಘಟಪ್ರಭಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಗ್ಯಾರಂಟಿ ಯೋಜನೆಗಳು ಬಡವರಿಗೆ ಅನುಕೂಲ: ಮಾಜಿ ಸಚಿವ ಶಶಿಕಾಂತ ನಾಯಿಕ

ಹುಕ್ಕೇರಿ: ರಾಜ್ಯ ಸರ್ಕಾರದ ಮಹಾತ್ವಕಾಂಕ್ಷಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಜನರಿಗೆ ಆರ್ಥಿಕ ಹೊರೆ ತಗ್ಗಿದಂತಾಗಿದೆ ಎಂದು ಮಾಜಿ ಸಚಿವ ಶಶಿಕಾಂತ ನಾಯಿಕ ಹೇಳಿದರು.

ಪಟ್ಟಣದ ಹೊರವಲಯದ ರವದಿ ಫಾರ್ಮಹೌಸ್‌ನಲ್ಲಿ ಗುರುವಾರ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ ಹಾಗೂ ಪುರಸಭೆ ಸಹಯೋಗದಲ್ಲಿ ಏರ್ಪಡಿಸಿದ ಗ್ಯಾರಂಟಿ ಯೋಜನೆಗಳ ಹುಕ್ಕೇರಿ ಹೋಬಳಿ ಮಟ್ಟದ ಸಮಾವೇಶದಲ್ಲಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳಿಂದ ಬಡ, ಮಧ್ಯಮ ವರ್ಗ ಹಾಗೂ ಮಹಿಳೆಯರಿಗೆ ಆರ್ಥಿಕ ಶಕ್ತಿ ತುಂಬುವಲ್ಲಿ ಮಹತ್ವದ ಪಾತ್ರ ನಿರ್ವಹಿಸುತ್ತಿವೆ ಎಂದರು.

ಅನ್ನಭಾಗ್ಯ, ಗೃಹಲಕ್ಷ್ಮೀ ಶಕ್ತಿ, ಗೃಹಜ್ಯೋತಿ, ವಿದ್ಯಾನಿಧಿ ಗ್ಯಾರಂಟಿ ಯೋಜನೆಗಳು ರಾಜ್ಯದಲ್ಲಿ ಕ್ರಾಂತಿಕಾರಿ ಬದಲಾವಣೆಗೆ ಕಾರಣವಾಗಿ ಕಾಂಗ್ರೆಸ್ ಸರ್ಕಾರ ಜನಪರ ಎನ್ನುವುದನ್ನು ನಿರೂಪಿಸಿವೆ. ಗ್ಯಾರಂಟಿ ಯೋಜನೆಗಳು ಬಡವರ ಕಲ್ಯಾಣಕ್ಕೆ ಪೂರಕವಾಗಿವೆ. ಇಡೀ ರಾಜ್ಯದ ಜನತೆ ಸುಖಿ ಜೀವನ ಸಾಗಿಸುವಂತಾಗಿದೆ. ಈ ಎಲ್ಲ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಸುಖಿ ಜೀವನ ಸಾಗಿಸಬೇಕು ಎಂದು ಅವರು ಹೇಳಿದರು.



ತಹಸೀಲದಾರ ಬಲರಾಮ ಕಟ್ಟಿಮನಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಶಿರಸ್ತೆದಾರ ಲೋಕೋಶ ಢಂಗೆ, ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘದ ಸ್ಥಾನಿಕ ಇಂಜನೀಯರ್ ನೇಮಿನಾಥ ಖೆಮಲಾಪುರೆ, ಕೆಎಸ್‌ಆರ್ಟಿಸಿ ಘಟಕ ವ್ಯವಸ್ಥಾಪಕರಾದ ಬಿ.ಎಸ್.ಪಾಟೀಲ, ವಿ.ಎಸ್. ಕಾಗವಾಡೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಎಚ್.ಹೊಳೆಪ್ಪ, ತಾಲೂಕು ಆರೋಗ್ಯ ಅಧಿಕಾರಿ ಡಾ.ಉದಯ ಕುಡಚಿ, ಕಂದಾಯ ನಿರೀಕ್ಷಕ ಮಲ್ಲಿಕಾರ್ಜುನ ಸಾರಾಪುರಿ, ಪಂಚಾಯತ್‌ರಾಜ್ ಸಹಾಯಕ ನಿರ್ದೇಶಕ ರಾಜು ಢಾಂಗೆ, ಪುರಸಭೆ ಸದಸ್ಯೆ ರೇಖಾ ಚಿಕ್ಕೋಡಿ, ಕಾಂಗ್ರೆಸ್ ಪ್ರಚಾರ ಸಮಿತಿ ಚಿಕ್ಕೋಡಿ ಜಿಲ್ಲಾ ಅಧ್ಯಕ್ಷ ಮಲ್ಲಿಕಾರ್ಜುನ ರಾಶಿಂಗೆ, ಮುಖಂಡರಾದ ಕೆಂಪಣ್ಣಾ ಶಿರಹಟ್ಟಿ, ಪ್ರಕಾಶ ಮೈಲಾಖೆ, ಕೆ.ವೆಂಕಟೇಶ, ಹೂಲಿ, ಕಿರಣ ಕರೋಶಿ, ಅನಂದ ಜಿರಲಿ, ಪ್ರಕಾಶ ಪಟ್ಟಣಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು. ಎಸ್.ಆರ್. ಗಸ್ತಿ ನಿರೂಪಿಸಿ ವಂದಿಸಿದರು.

# ಚುನಾವಣಾ ಕಾರ್ಯಕ್ಕೆ ನಿಯೋಜಿತರು ನಿಯಮಾನುಸಾರ ಕತ್ಯವ್ಯ ನಿರ್ವಹಿಸಬೇಕು; ರಜೆ, ಕರ್ತವ್ಯ ಗೈರಿಗೆ ಪೂರ್ವಾನುಮತಿ ಕಡ್ಡಾಯ : ಜಿಲ್ಲಾಚುನಾವಣಾಧಿಕಾರಿ

ಧಾರವಾಡ: ಲೋಕಸಭೆ ಸಾರ್ವತ್ರಿಕ ಚುನಾವಣೆ 2024ಕ್ಕೆ ಸಂಭಂದಿಸಿದಂತೆ ಜಿಲ್ಲಾಡಳಿತವು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದ್ದು, ಈಗಾಗಲೇ ಚುನಾವಣಾ ಕರ್ತವ್ಯ ನಿರ್ವಹಣೆಗೆ ನೋಡಲ್ ಅಧಿಕಾರಿ, ಅಧಿಕಾರಿಗಳನ್ನು, ಸಿಬ್ಬಂದಿಗಳನ್ನು ನಿಯೋಜಿಸಿ, ಆದೇಶಿಸಲಾಗಿದೆ. ಯಾವುದೇ ಅಧಿಕಾರಿ, ಸಿಬ್ಬಂದಿಗಳು ಜಿಲ್ಲಾ ಚುನಾವಣಾಧಿಕಾರಿಗಳ ಪೂರ್ವಾನುಮತಿ ಇಲ್ಲದೆ ರಜೆ ಅಥವಾ ಗೈರು ಹಾಜರಾಗಬಾರದು. ಅನುಮತಿ ಪಡೆಯದೆ ಗೈರಾದಲ್ಲಿ ಗಂಭೀರವಾಗಿ ಪರಿಗಣಿಸಿ, ಅಂತವರನ್ನು ಜಿಲ್ಲೆಯಿಂದ ಬಿಡುಗಡೆ ಮಾಡಿ, ಮಾನ್ಯ ಭಾರತ ಚುನಾವಣಾ ಆಯೋಗಕ್ಕೆ ಶಿಸ್ತು ಕ್ರಮಕೈಗೊಳ್ಳಲು ಶಿಫಾರಸ್ಸು ಮಾಡಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.



ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಾರ್ವತ್ರಿಕ ಲೋಕಸಭಾ ಚುನಾವಣೆ-2024 ಕಾರ್ಯಗಳಿಗೆ ನೂತನವಾಗಿ ನಿಯೋಜಿತರಾಗಿರುವ ನೋಡಲ್ ಅಧಿಕಾರಿಗಳ, ಚುನಾವಣಾ ಅಧಿಕಾರಿ, ಸಿಬ್ಬಂದಿಗಳ ಸಭೆ ಜರುಗಿಸಿ ಮಾತನಾಡಿದರು.

ಲೋಕಸಭೆಯ ಧಾರವಾಡ ಮತಕ್ಷೇತ್ರದ ಚುನಾವಣೆಯನ್ನು ಯಶಸ್ವಿಯಾಗಿ ಮತ್ತು ಪಾರದರ್ಶಕವಾಗಿ, ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಗಳಂತೆ ನಡೆಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಚುನಾವಣಾ ಸಂಬಂಧಿತ ಎಲ್ಲ ಕಾರ್ಯಗಳು ಸುಗಮವಾಗಿ, ಕಾಲಮಿತಿಯಲ್ಲಿ ನಡೆಸಲು ವಿವಿಧ ವಿಭಾಗಗಳಿಗೆ ಜಿಲ್ಲೆಯ 21 ಜನ ಹಿರಿಯ ಅಧಿಕಾರಿಗಳನ್ನು ನೊಡಲ್ ಅಧಿಕಾರಿಗಳನ್ನಾಗಿ ನೇಮಿಸಿ, ಆದೇಶಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದರು.

ನೊಡಲ್ ಅಧಿಕಾರಿಗೆ ತನ್ನ ಅಧೀನದಲ್ಲಿ ಕರ್ತವ್ಯ ನಿರ್ವಹಿಸಲು ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಅವರ ತಂಡದ ಸದಸ್ಯರನ್ನಾಗಿ ನೇಮಿಸಿದೆ. ಪ್ರತಿ ನೊಡಲ್ ಅಧಿಕಾರಿ ತನ್ನ ವಿಭಾಗದ ಕಾರ್ಯ ಮತ್ತು ಜವಾಬ್ದಾರಿಗಳ ಕುರಿತು ತರಬೇತಿ ನೀಡಿ, ತನ್ನ ತಂಡವನ್ನು ಸುಸಜ್ಜಿತಗೊಳಿಸುವುದು ಅವರ ಕರ್ತವ್ಯವಾಗಿದೆ. ಪ್ರತಿಯೊಬ್ಬ ಅಧಿಕಾರಿ ತನಗೆ ನಿಯೋಜಿಸಿದ ಚುನಾವಣಾ ಕಾರ್ಯಗಳ ಬಗ್ಗೆ, ಅದಕ್ಕೆ ಅನ್ವಯಿಸುವ ಸೆಕ್ಷನ್, ಕಾನೂನು, ಐಪಿಸಿ ತಿಳಿದಿರಬೇಕು. ತನ್ನ ಜವಾಬ್ದಾರಿ ಮತ್ತು ಕರ್ತವ್ಯಗಳನ್ನು ಅರ್ಥೈಸಿಕೊಂಡು ಕರ್ತವ್ಯ ನಿರ್ವಹಿಸಬೇಕೆಂದು ಜಿಲ್ಲಾ ಚುನಾವಣಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಎಫ್‌ಎಸ್ಟಿ, ಎಸ್‌ಎಸ್ಟಿ ಹಾಗೂ ಇತರ ತಂಡಗಳ ಮಧ್ಯ ಪರಸ್ಪರ ಸಮನ್ವಯ, ಸಂವಹನ ಇರಬೇಕು. ಚುನಾವಣಾ ಕಾರ್ಯಗಳನ್ನು ಗಂಭೀರವಾಗಿ ಪರಿಗಣಿಸಿ, ಮಾಡಬೇಕು. ಕಣ್ತಪ್ಪಿನಿಂದಲೂ ಸಹ ಯಾವುದೇ ಚುನಾವಣಾ ಕರ್ತವ್ಯ ಲೋಕಪವಾಗಬಾರದು. ಜಿಲ್ಲಾ ಚುನಾವಣಾ ಆಯೋಗಕ್ಕೆ ಸಾರ್ವಜನಿಕರು, ರಾಜಕೀಯ ಪಕ್ಷಗಳು ಮಾಧ್ಯಮಗಳು ಮತ್ತು ಇತರ ಮೂಲಗಳಿಂದಲೂ ತಮ್ಮ ಚುನಾವಣಾ ಕರ್ತವ್ಯ ಬಗ್ಗೆ ಮಾಹಿತಿ ಬರುತ್ತವೆ. ನಾನು ಸಹ ಜಿಲ್ಲೆಯ ತುಂಬ ಸ್ವತಃ ಪ್ರಯಾಣಿಸಿ, ಹಗಲು-ರಾತ್ರಿ ನಿಯೋಜಿತ ತಂಡಗಳ ಕಾರ್ಯವನ್ನು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸುತ್ತೇನೆ ಎಂದು ಅವರು ಎಚ್ಚರಿಸಿದರು.

ಎಲ್ಲ ನೋಡಲ್ ಅಧಿಕಾರಿಗಳು, ಜಿಲ್ಲಾಧಿಕಾರಿಗಳ ಕಚೇರಿ ಚುನಾವಣಾ ತಹಶೀಲ್ದಾರ, ಶಿರಸ್ತೆದಾರರು, ವಿಷಯ ನಿರ್ವಾಹಕರು, ನೊಡಲ್ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ಯಾಮಾರಿಸಿ 11ಲಕ್ಷ ರೂ.ಮೌಲ್ಯದ ಮೊಬೈಲ್ ಕಳವು, ಇಬ್ಬರ ಬಂಧನ



ಬೆಂಗಳೂರು: ಗ್ರಾಹಕರಂತೆ ಗಮನ ಬೇರೆಡೆ ಸೆಳೆದು ಮೊಬೈಲ್ ಕಳವು ಮಾಡುತ್ತಿದ್ದ ಹಾಗೂ ಹ್ಯಾಂಡಲ್ ಲಾಕ್ ಮುರಿದು ದ್ವಿಚಕ್ರ ವಾಹನ ಕಳವು ಮಾಡುತ್ತಿದ್ದ ಇಬ್ಬರನ್ನು ಜ್ಞಾನಭಾರತಿ ಠಾಣೆ ಪೊಲೀಸರು ಬಂಧಿಸಿ 11 ಲಕ್ಷ ರೂ. ಮೌಲ್ಯದ 5ದ್ವಿಚಕ್ರ ವಾಹನಗಳು ಹಾಗೂ 41 ಮೊಬೈಲ್ಗಳನ್ನು ವಶಪಡಿಸಿಕೊಂಡಿದ್ದಾರೆ.

ಬೇಗೂರು ನಿವಾಸಿ ಶಿವರಾಜ್ ಮತ್ತು ಆದೂರು ನಿವಾಸಿ ನವೀನ ಬಂಧಿತ ಆರೋಪಿಗಳು. ಇವರಿಬ್ಬರು ಜೊತೆಯಾಗಿ ಬೈಕ್ನಲ್ಲಿ ಸುತ್ತಾಡುತ್ತಾ ಅಂಗಡಿಯಲ್ಲಿ ಒಬ್ಬರೇ ಇರುವುದನ್ನು ಗಮನಿಸಿ ಅಲ್ಲಿಗೆ ಒಬ್ಬ ಅಂಗಡಿಯಲ್ಲಿದ್ದವರನ್ನು ಮಾತನಾಡಿಸುತ್ತಾ ಗಮನ ಸೆಳೆದರೆ ಮತ್ತೊಬ್ಬ ಟೇಬಲ್ ಮೇಲಿಟ್ಟಿದ್ದ ಮೊಬೈಲ್ ಹಾಗೂ ಹಣವನ್ನು ಎಗರಿಸಿ ಜಾಗ ಖಾಲಿ ಮಾಡುತ್ತಿದ್ದರು.

ಆರೋಪಿಗಳು ಗ್ರಾಹಕರಂತೆ ಗಮನ ಬೇರೆಡೆ ಸೆಳೆದು ಮೊಬೈಲ್ ಕಳವು ಮಾಡುತ್ತಿದ್ದ ಬಗ್ಗೆ ಹಾಗೂ ಹ್ಯಾಂಡಲ್ ಲಾಕ್ ಮುರಿದು ದ್ವಿಚಕ್ರ ವಾಹನ ಕಳವು ಮಾಡುತ್ತಿದ್ದುದು ಗೊತ್ತಾಗಿದೆ. ಆರೋಪಿಗಳ ಬಂಧನದಿಂದ ಜ್ಞಾನಭಾರತಿ ಪೊಲೀಸ್ ಠಾಣೆಯ 2 ದ್ವಿಚಕ್ರ ವಾಹನ ಕಳವು ಪ್ರಕರಣ, ಕುಂಬಳಗೂಡು, ಬ್ಯೆಯ್ಯಪ್ಪನಹಳ್ಳಿ, ಬೇಗೂರು ಪೊಲೀಸ್ ಠಾಣೆಯ ತಲಾ 1 ದ್ವಿಚಕ್ರ ವಾಹನ ಕಳವು ಪ್ರಕರಣಗಳು ಪತ್ತೆಯಾಗಿದೆ.

# ಭರತನಾಟ್ಯ ಕಲೆಯು ಭಾರತೀಯ ಸಂಸ್ಕೃತಿಯ ಪ್ರತೀಕ: ಚಿತ್ತ ಪ್ರಕಾಶನಂದ್ ಮಹಾಸ್ವಾಮೀಜಿ

## ಕ್ರಾಂತಿ ಮಹಿಳಾ ಮಂಡಳ, ಉಮಾ ಸಂಗೀತ ಪ್ರತಿಷ್ಠಾನ ವತಿಯಿಂದ ಅಂತಾರಾಷ್ಟ್ರೀಯ ಭರತ ನಾಟ್ಯ ಚಾರಿಟಿ ಶೋ ಕಾರ್ಯಕ್ರಮ

ಬೆಳಗಾವಿ: "ಭರತನಾಟ್ಯ ಕಲೆಯು ಭಾರತೀಯ ಸಂಸ್ಕೃತಿಯ ಪ್ರತೀಕವಾಗಿದ್ದು, ನಾಟ್ಯ ಕಲೆಯಲ್ಲಿ ಆರೋಗ್ಯದ ಗುಟ್ಟು ಅಡಗಿದೆ. ಹೀಗಾಗಿ, ನಮ್ಮ ಮಕ್ಕಳಿಗೆ ಭಾರತೀಯ ಪರಂಪರೆಗಳ ಕಲೆಗಳನ್ನು ಕಲಿಸಬೇಕಾಗಿದೆ.

ಅದನ್ನು ಉಳಿಸಿ ಬೆಳೆಸುವ ಜವಾಬ್ದಾರಿ ನಮ್ಮ ಮೇಲಿದೆ" ಎಂದು ಪರಮ ಪೂಜ್ಯ ಚಿತ್ತ ಪ್ರಕಾಶನಂದ್ ಮಹಾ ಸ್ವಾಮೀಜಿಗಳು ಹೇಳಿದರು.

ಇಲ್ಲಿನ ಕೆಎಲ್‌ಇ ಡಾ.ರಾಜಶೇಖರ ಸಭಾಂಗಣದಲ್ಲಿ ಕ್ರಾಂತಿ ಮಹಿಳಾ ಮಂಡಳ ಹಾಗೂ ಉಮಾ ಸಂಗೀತ ಪ್ರತಿಷ್ಠಾನ ವತಿಯಿಂದ ಆಯೋಜಿಸಲಾದ ಪುಣ್ಯಾ ನೃತ್ಯ ಕಂಪನಿಯ ಬೆಂಗಳೂರವರ ಅಂತಾರಾಷ್ಟ್ರೀಯ ಭರತ ನಾಟ್ಯ ಕಲಾವಿದರ ನಾಗಮಂಡಲ ಚಾರಿಟಿ ಶೋ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು.

ಉತ್ತಮ ಆರೋಗ್ಯಕ್ಕೆ ಭರತನಾಟ್ಯ ಪೂರಕವಾಗಿದೆ. ಭಾರತೀಯ ಸಂಸ್ಕೃತಿ ಹಾಗೂ ಕಲಾ ಪ್ರಕಾರಗಳಿಗೆ ವಿಶ್ವದೆಲ್ಲೆಡೆ ಮಾನ್ಯತೆ ಇದೆ.

ಭರತನಾಟ್ಯ ಎಂಬುದು ಕೇವಲ ಒಂದು ನೃತ್ಯ ಕಲೆಯಲ್ಲ. ಅದೊಂದು ದಿವ್ಯವಾದ ಸಮಗ್ರ ಅಭಿವ್ಯಕ್ತಿ. ಭರತನಾಟ್ಯ ಕಲೆಯನ್ನು ಹೆಚ್ಚಿನ ಮಟ್ಟದಲ್ಲಿ ಪ್ರೋತ್ಸಾಹಿಸಬೇಕು" ಎಂದು ಸಲಹೆ ನೀಡಿದರು.



ಕ್ರಾಂತಿ ಮಹಿಳಾ ಮಂಡಳ ಹಾಗೂ ಉಮಾ ಸಂಗೀತ ಪ್ರತಿಷ್ಠಾನ ನಿರಂತರ ಸಮಾಜ ಸೇವೆ ನಡೆಸುತ್ತಿರುವುದು ಹೆಮ್ಮೆಯ ಸಂಗತಿ, ಮಕ್ಕಳಿಗಾಗಿ ಭರತನಾಟ್ಯದ ಅಂತಾರಾಷ್ಟ್ರೀಯ ಕಲಾವಿದರಾದಂತ ಆದಿತ್ಯ ಪಿವಿ, ಶೃತಿ ಗೋಪಾಲ ಮತ್ತು ಪಾರ್ಶ್ವನಾಥ ಉಪಾಧ್ಯಯರಿಂದ ಆಗಮಿಸಿ ಪ್ರದರ್ಶನ ನೀಡಿರುವುದು ನಮ್ಮೆಲ್ಲರ ಪುಣ್ಯ ಎಂದರು.


ಭರತ ನಾಟ್ಯ ಅಂತಾರಾಷ್ಟ್ರೀಯ ಕಲಾವಿದರಾದಂತ ಆದಿತ್ಯ ಪಿವಿ ,ಶೃತಿ ಗೋಪಾಲ ಮತ್ತು ಪಾರ್ಶ್ವನಾಥ ಉಪಾಧ್ಯಯರಿಂದ ಅರ್ಷ್ ವಿದ್ಯಾಆಶ್ರಮದ ಮಕ್ಕಳ ಶಿಕ್ಷಣಕ್ಕಾಗಿ ಚಾರಿಟಿ ಶೋ ಏರ್ಪಡಿಸಲಾಗಿ-ತ್ತು. ಪ್ರದರ್ಶನ ಬಳಿಕ ಕಲಾವಿದರಿಗೆ ಸನ್ಮಾನಿಸಲಾಯಿತು.

ಕ್ರಾಂತಿ ಮಹಿಳಾ ಮಂಡಳ, ಉಮಾ ಸಂಗೀತ ಪ್ರತಿಷ್ಠಾನ ಸಂಸ್ಥೆ ಅವರು, ಅರ್ಷ್ ವಿದ್ಯಾ ಆಶ್ರಮದ ಮಕ್ಕಳನ್ನು ದತ್ತು ಪಡೆದು, ವಿದ್ಯಾ ಆಶ್ರಮಕ್ಕೆ ನೇರವಾದರು.

ಕಾರ್ಯದರ್ಶಿ ರೇಣುಕಾ ಕಾಂಬಳೆ ಪ್ರಾಸ್ತಾವಿಕ ವಾಗಿ ಮಾತನಾಡಿದರು. ಉಪಾದಕ್ಷ್ಯ ತ್ರಿಶೀಲಾ ಪಾಯಪ್ಪನ್ನವರ್ ಅಥಿತಿ ಪರಿಚಯಿಸಿದರು.

ಈ ಸಂದರ್ಭದಲ್ಲಿ ಸಂಸದೆ ಮಂಗಳಾ ಅಂಗಡಿ, ಅಭಿನವ ವೆಂಕಟೇಶ್ ಮಹಾರಾಜ್ ಮಹಾಸ್ವಾಮಿಗಳು, ಪೂಜ್ಯ ಮಾತೇ ವಾಗ್ದೇವಿ ತಾಯಿ, ಪೂಜ್ಯ ಮಾತೇ ಕುಮುದಿನಿ ತಾಯಿ, ಕೆಎಲ್ ಇ ವೈದ್ಯ ಡಾ.ರಾಜಶೇಖರ್ ಪಾಟೀಲ, ಡಾ ಅರವಿಂದ್ ಕುಲಕರ್ಣಿ ದಂಪತಿಗಳು, ನ್ಯಾಯವಾದಿ ಎಂ.ಬಿ ಜಿರಲಿ, ಮದನ್ಮೋಹನ್ ಕಾವಟೇಕರ ಎಂಡಿ ಪಾಲ್ಯೆಮರ್ಸ್ ಹಾಗೂ ಎಸಿಪಿಆರ್ ಟ್ರಸ್ಟ್ , ಅನಿತಾ ಕನಬರಗಿ ,ಪ್ರಿಯಾಂಕಾ ಗಡ್ಕರಿ, ತುಳಸಾ ಪಾಟೀಲ್ ಮತ್ತು ಡಾ. ರಾಜೇಂದ್ರ ಮಠದ, ಡಾ.ಗುಡಗನಟ್ಟಿ, ಅಧ್ಯಕ್ಷೆ ಮಂಗಲ ಮಠದ ಸ್ವಾಗತಿಸಿದರು. ಉಮಾಸಂಗೀತ ಪ್ರತಿಷ್ಠಾನದ ವಿದ್ಯಾರ್ಥಿನಿಯರೂ ಸ್ವಾಗತ ಗೀತೆ ಪ್ರಸ್ತುತ ಪಡಿಸಿದರು. ಅಕ್ಷತಾ ಪಾಟೀಲ್ ಮತ್ತು ಅಶ್ವಿನೀ ನವಲೆ ಕಾರ್ಯಕ್ರಮ ನಿರೂಪಿಸಿದರು. ದೀಪ್ತಿ ಕಗ್ವಾಡ್ ವಂದಿಸಿದರು. ಹಾಗೂ ಇತರರು ಇದ್ದರು.

## ಗೋಕಾಕ ಉಪ ಅರಣ್ಯ ಸಂರಕ್ಷಣಾಧಿಕಾರಿ ಅಮಾನತು




ಬೆಳಗಾವಿ: ರಾಯಬಾಗ ಶಾಸಕರೊಂದಿಗೆ ಮೊಬೈಲ್ ಸಂಭಾಷಣೆಯಲ್ಲಿ ಅನುಚಿತವಾಗಿ ಮಾತನಾಡಿದ ಆರೋಪದ ಮೇಲೆ ಸರ್ಕಾರ ಗೋಕಾಕ ಉಪ ಅರಣ್ಯ ಸಂರಕ್ಷಣಾಧಿಕಾರಿ ಶಿವಾನಂದ ನಾಯಕವಾಡಿ ಅವರನ್ನು ಅಮಾನತುಗೊಳಿಸಿದೆ.

ಕಳೆದ ಕೆಲ ತಿಂಗಳ ಹಿಂದೆ ರಾಯಭಾಗ ಶಾಸಕ ದುರ್ಯೋಧನ ಐಹೊಳೆ ಅವರು ಸರ್ಕಾರಿ ಕೆಲಸದ ನಿಮಿತ್ತ ಗೋಕಾಕ ಉಪ ಅರಣ್ಯ ಸಂರಕ್ಷಣಾಧಿಕಾರಿಯಾಗಿದ್ದ ಶಿವಾನಂದ ನಾಯಿಕವಾಡಿ ಅವರಿಗೆ ದೂರವಾಣಿ ಕರೆ ಮಾಡಿದ್ದಾಗ, ಶಾಸಕ ಮತ್ತು ಅಧಿಕಾರಿ ಮಧ್ಯೆ ವಾಗ್ವಾದ ನಡೆದು, ಆ ಆಡಿಯೋ ವೈರಲ್ ಆಗಿತ್ತು. ಈ ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿತ್ತು. ಕೂಡಲೇ ಗೋಕಾಕ **DC** ಈ ಶಿವಾನಂದ ಅವರಿಗೆ ನೊಟೀಸ್ ನೀಡಿತ್ತು. ವಿಚಾರಣೆ ಬಳಿಕ ಸರ್ಕಾರ ಡಿಸಿಎಫ್ ಶಿವಾನಂದ ನಾಯಿಕವಾಡಿ ಅವರನ್ನು ಅಮಾನತುಗೊಳಿಸಲಾಗಿದೆ. ಬೆಳಗಾವಿ ಡಿಸಿಎಫ್ ಎಸ್. ಕೆ. ಕಲ್ಲೋಳಿಕರ ಅವರಿಗೆ ಗೋಕಾಕ ವಿಭಾಗದ ಹೆಚ್ಚುವರಿ ಜವಾಬ್ದಾರಿ ನೀಡಿ ಸರಕಾರ ಆದೇಶಿಸಿದೆ.

## ಬೆಳಗಾವಿ: ಬೈಕಿಗೆ ಪೀಕಪ್ ವಾಹನ ಡಿಕ್ಕಿ: ಸವಾರ ಸಾವು

ಬೆಳಗಾವಿ: ಪೀಕಪ್ ವಾಹನ ಡಿಕ್ಕಿ ಹೊಡೆದ ಪರಿಣಾಮ ಓರ್ವ ಸ್ಥಳದಲ್ಲೆ ಮೃತಪಟ್ಟು ಓರ್ವನ ಸ್ಥಿತಿ ಭೀರವಾಗಿರುವ ಘಟನೆ ಹುಕ್ಕೇರಿ ತಾಲೂಕಿನ ಯಮಕನಮರ್ಡಿ ರಾಷ್ಟ್ರಿಯ ಹೇದ್ದಾರಿ ದಾದಬಾನಟ್ಟಿ ಹತ್ತಿರ ನಡೆದಿದೆ.

ಅರಭಾಂವಿ ತಾಲೂಕಿನ ಗದಿಗಯ್ಯಾ ಹಿರೇಮಠ ಸ್ಥಳದಲ್ಲೆ ಮೃತಪಟ್ಟ ವ್ಯಕ್ತಿ. ಗುಜರಾತ ರಾಜ್ಯದ ನೊಂದಣಿ ಹೊಂದಿದ ಪೀಕಪ್ ವಾಹನ ಮುಂದೆ ಸಾಗುತ್ತಿದ್ದ ಬೈಕಿಗೆ ಡಿಕ್ಕಿ ಹೊಡೆದ ಪರಿಣಾಮ ಗದಿಗಯ್ಯಾ ಎಂಬುವರು ಸ್ಥಳದಲ್ಲೆ ಮೃತಪಟ್ಟು ಹಿಂಬದಿ ಸವಾರ ಗಂಭೀರ ಗಾಯಗೊಂಡಿದ್ದಾನೆ. ಖುಡಲೇ ಈ ವ್ಯಕ್ತಿಯನ್ನು ಜಿಲ್ಲಾ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ. ಈ ಕುರಿತು ಯಮಕನಮರಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಿತ್ತೂರು ರಾಣಿ ಚನ್ನಮ್ಮ ಪ್ರಶಸ್ತಿಗೆ ಲತಾ ಹುದ್ದಾರ ಆಯ್ಕೆ



ಬೆಳಗಾವಿ: ರಾಯಬಾಗ ತಾಲೂಕಿನ ಮುಗಳಖೋಡ ಗ್ರಾಮದ ಲತಾ ದೇವೆಂದ್ರ ಹುದ್ದಾರ ಅವರಿಗೆ ಕನ್ನಡ ಹಾಗೂ ಸಮಾಜ ಸೇವೆಯನ್ನು ಗುರುತಿಸಿ ಸಪ್ತಸ್ವರ ಸಂಗೀತ ಕಲಾ ಬಳಗ ಬೆಳಗಾವಿ ವತಿಯಿಂದ ಕಿತ್ತೂರು ರಾಣಿ ಚನ್ನಮ್ಮ ಸದ್ಭಾವನಾ ರಾಜ್ಯ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಸಪ್ತಸ್ವರ ಸಂಗೀತ ಕಲಾ ಬಳಗದಿಂದ ಇಲ್ಲಿನ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಹಮ್ಮಿಕೊಂಡಿರುವ "ವಿಶ್ವ ಕನ್ನಡ ಸಾಹಿತ್ಯ ಹಾಗೂ ಸಾಂಸ್ಕೃತಿಕ ಉತ್ಸವ" ಕಾರ್ಯಕ್ರಮದಲ್ಲಿ ಲತಾ ದೇವೆಂದ್ರ ಹುದ್ದಾರ ಅವರಿಗೆ ಅವರಿಗೆ ಕಿತ್ತೂರು ರಾಣಿ ಚನ್ನಮ್ಮ ಸದ್ಭಾವನಾ ರಾಜ್ಯ ಪ್ರಶಸ್ತಿ ನೀಡಲಾಗುವುದು ಎಂದು ಸಪ್ತಸ್ವರ ಸಂಗೀತ ಕಲಾ ಬಳಗದ ಅಧ್ಯಕ್ಷರು ಪತ್ರಿಕಾ ಪ್ರಕಟಣೆಗೆ ತಿಳಿಸಿದ್ದಾರೆ.

# 'ಲೋಕ' ಚುನಾವಣೆಯಲ್ಲಿ ಪ್ರಿಯಂಕಾ ಜಾರಕಿಹೊಳಿ ಸ್ಪರ್ಧಿಸಲ್ಲ: ಸಚಿವ ಸತೀಶ್ ಜಾರಕಿಹೊಳಿ ಸ್ಪಷ್ಟನೆ

ಬೆಳಗಾವಿ: ಈ ಭಾರಿ ಲೋಕಸಭೆ ಚುನಾವಣೆಯಲ್ಲಿ ಪುತ್ರಿ ಪ್ರಿಯಂಕಾ ಜಾರಕಿಹೊಳಿ ಸ್ಪರ್ಧೆ ಮಾಡುವದಿಲ್ಲ.ಸಾಮಾನ್ಯ ಕಾರ್ಯಕರ್ತರಿಗೆ ಚಿಕ್ಕೋಡಿ ಭಾಗದಿಂದ ಟಿಕೆಟ್ ಕೊಡಬೇಕು ಎಂಬ ನಿರ್ಧಾರ ಮಾಡಲಾಗಿದೆ. ಆದ್ದರಿಂದ ಈ ಭಾರಿ ಲೋಕಸಭೆ ಚುನಾವಣೆಯಲ್ಲಿ ಪ್ರಿಯಂಕಾ ಜಾರಕಿಹೊಳಿ ಸ್ಪರ್ಧಿಸಲ್ಲ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಚಿಕ್ಕೋಡಿ ಕಾಂಗ್ರೆಸ್ ನಲ್ಲಿ ಸಾಕಷ್ಟು ಜನ ಆಕಾಂಕ್ಷಿಗಳಿದ್ದಾರೆ. ಉದಾಹರಣೆಗೆ ಚಿಂಗಳೆ, ಬುಟಾಳೆ, ಗಜಾನನ ಇದ್ದಾರೆ. ಅಲ್ಲದೇ ಕ್ರೀಯಾಶೀಲ ಕಾರ್ಯಕರ್ತರು ಇರುವಾಗ ಈ ಭಾಗದಲ್ಲಿ ನಮ್ಮ ಕುಟುಂಬದಿಂದ ಯಾರು ಸ್ಪರ್ಧೆ ಮಾಡುವದಿಲ್ಲ ಎಂದ ಅವರು, ಬೆಳಗಾವಿ ಹಾಗೂ ಚಿಕ್ಕೋಡಿ ಭಾಗದಲ್ಲಿ ಯಾರಿಗೆ ಟಿಕೆಟ್ ಕೊಡಬೇಕು ಎಂದು ಈಗಾಗಲೇ ಎರಡು ಕ್ಷೇತ್ರಕ್ಕೆ ಇಬ್ಬಿಬ್ಬರ ಹೆಸರು ಫೈನಲ್ ಮಾಡಲಾಗಿದೆ. ಅಂತಿಮ ತಿರ್ಮಾಣವನ್ನು ಹೈ ಕಮಾಂಡ್ ತೆಗೆದುಕೊಳ್ಳಲಿದೆ ಎಂದರು.

ಈ ಲೋಕಸಭಾ ಚುನಾವಣೆಯಲ್ಲಿ ಸತೀಶ ಜಾರಕಿಹೊಳಿ ಅವರನ್ನು ನಿಲ್ಲಿಸಿದರೆ ಇತರರ ಹಾದಿಗಳು ಸುಗಮವಾಗುತ್ತವೆ ಎಂಬ ಮಾತುಗಳು ಜಿಲ್ಲೆಯಲ್ಲಿ ಹರಿದಾಡುತ್ತಿವೆ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅವರು. ನನ್ನನ್ನು ಕಣಕ್ಕೆ ಇಳಿಸಬೇಕು ಎಂಬ ಚರ್ಚೆ ನಡೆದಿರುವುದು ಸತ್ಯ. ಆದರೆ ನಿಷ್ಠಾವಂತ ಕಾರ್ಯಕರ್ತರಿಗೂ ಅವಕಾಶ ನೀಡಬೇಕೆಂಬ ಉದ್ದೇಶದಿಂದ ನಾನು ಕಣಕ್ಕೆ ಇಳಿಯುತ್ತಿಲ್ಲ ಎಂದು ಸ್ಪಷ್ಟ ಪಡಿಸಿದರು.

ಕ್ಷೇತ್ರದಲ್ಲಿ ಜಾತಿ ಲೆಕ್ಕಾಚಾರಕ್ಕಿಂತ ಗೆಲ್ಲುವ ಅಭ್ಯರ್ಥಿಗಳ ಬಗ್ಗೆ ಚರ್ಚೆ: ಲೋಕಸಭಾ ಚುನಾವಣೆ ನಿಮಿತ್ತ ಬೆಳಗಾವಿ ಹಾಗೂ ಚಿಕ್ಕೋಡಿ ಭಾಗದ ಕ್ಷೇತ್ರದಲ್ಲಿ ಜಾತಿ



ಲೆಕ್ಕಾಚಾರ ನಡೆಯುತ್ತಿದಿಯಾ ಎಂಬ ಪ್ರಶ್ನೆಗೆ ಉತ್ತರಿಸಿದ ಸಚಿವರು, ಜಾತಿ ಲೆಕ್ಕಾಚಾರ ಆಮೇಲೆ, ಮೊದಲು ಇಲ್ಲಿ ಏನೆ ಇದ್ದರೂ ಗೆಲ್ಲುವ ಅಭ್ಯರ್ಥಿ ಹಾಗೂ ಯಾರು ಪೊಪ್ಯುಲರ್ ಇದ್ದಾರೋ ಅವರ ಬಗ್ಗೆ ಚರ್ಚೆ ನಡೆಯುತ್ತದೆ.

ಆಮೇಲೆ ಜಾತಿ ಲೆಕ್ಕಾಚಾರ ನಡೆಯುತ್ತದೆ ಎಂದ ಅವರು, ನಮ್ಮ ಡ್ಯೂಟಿ ಎರಡು ಕ್ಷೇತ್ರಕ್ಕೆ ಹೆಸರು ಪಟ್ಟಿ ಮಾಡುವುದು ಅಷ್ಟೆ, ಮುಖ್ಯವಾಗಿ ಎರಡು ಕ್ಷೇತ್ರದಲ್ಲಿ ಸಚಿವೆ ಲಕ್ಷ್ಮೀ ಅವರ ಮಗನ ಹೆಸರಿದ್ದು, ಸರ್ವೇಯಲ್ಲಿ ಯಾರ ಹೆಸರು ಬರುತ್ತದೆಯೋ ಅವರನ್ನೇ ಅಂತಿಮವಾಗಿ ಕಣಕ್ಕೇ ಇಳಿಸಲಾಗುವುದು ಎಂದರು.

ಅಕ್ರಮ ತಿನಿಸು ಕಟ್ಟೆ ಮಳಿಗೆಗಳ ಬಗ್ಗೆ ತನಿಖೆ ಯಾವ ಹಂತಕ್ಕೆ ಬಂದಿದೆ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತ-ರಿಸಿದ ಸಚಿವರು, ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿರುವ ತಿನಿಸು ಕಟ್ಟೆ ಅಕ್ರಮ ಮಳಿಗೆ ನಿರ್ಮಾಣದ ತನಿಖೆ ಒಂದು ಹಂತಕ್ಕೆ ಬಂದಿದೆ. ಅಧಿಕಾರ ಮಟ್ಟದಲ್ಲಿ ಸಹ ಚರ್ಚಿಸಿ ನೋಟಿಸ್ ನೀಡಲಾಗಿದೆ.

ಅವರಿಂದ ಉತ್ತರ ನೋಡುತ್ತಿದ್ದೇವೆ. ಸರ್ಕಾರದ ಮಟ್ಟದಲ್ಲಿ ಕಾನೂನು ತೊಡಕುಗಳಿಗೆ ಇರುವುದು ಸಾಮಾನ್ಯ, ಒದೊಂದೇ ಪರಿಹಾರ ಮಾಡುವ ಪ್ರಯತ್ನ ಮಾಡಲಾಗುವುದು ಎಂದು ತಿಳಿಸಿದರು.

ಕ್ಷೇತ್ರದಲ್ಲಿ ನಡೆಯುತ್ತಿದೆ ಚುನಾವಣಾ ತಯಾರಿ: ಎರಡು ಕ್ಷೇತ್ರದಲ್ಲಿ ಅಭ್ಯರ್ಥಿಗಳ ಗೆಲುವುವಿಗೆ ಬೂತಮಟ್ಟದ ಸಭೆಗಳನ್ನು ಮಾಡಲಾಗುತ್ತಿದೆ. ನಮ್ಮ ಸರ್ಕಾರ ಜಾರಿಗೆ ತಂದ ಗ್ಯಾರಂಟಿ ಯೋಜನೆಗಳ ಜಾಗೃತಿ ಮೂಡಿಸುವ ಮುಟ್ಟಿಸುವ ಕೆಲಸವನ್ನು ನಮ್ಮ ಕಾರ್ಯಕರ್ತರು ಮಾಡಲಿದ್ದಾರೆ. ಇನ್ನು ಒಂದು ವಾರದಲ್ಲಿ ಅಂತಿಮವಾಗಿ ಅಭ್ಯರ್ಥಿಗಳ ಘೋಷಣೆಯಾಗಲಿದೆ ಎಂದರು.

ಹೊಸ ಪೀಳಿಗೆ ಬರಲು ಹೊಸಬರಿಗೆ ಅವಕಾಶ: ಚಿಕ್ಕೋಡಿ ಕ್ಷೇತ್ರದಲ್ಲಿ ಹೊಸ ಪೀಳಿಗೆ ಬರಲು ಹೊಸಬರಿಗೆ ಅಂದರೆ ಸಾಮಾನ್ಯ ಕಾರ್ಯಕರ್ತರಿಗೆ ಅವಕಾಶ ನೀಡಲಾಗುತ್ತಿದೆ. ಕ್ಷೇತ್ರದಲ್ಲಿ ಹಳಬ್ರೆ ನಾಯಕನಾಗುತ್ತಾ ಹೊರಟರೇ ಹೇಗೆ. ಮುಂದೊಂದು ದಿನ ಹೊಸ ಪೀಳಿಗೆ ಬರಬೇಕಲ್ವಾ ಎಂದ ಅವರು, ಹೊಸ ಪೀಳಿಗೆ ಬರಲು ಹೊಸಬರಿಗೆ ಅವಕಾಶ ನೀಡಲಾಗುವುದು. ಮುಖ್ಯವಾಗಿ ನಮ್ಮ ಕ್ಷೇತ್ರದಲ್ಲಿ ಈ ಭಾರಿ ಮಹಿಳೆಯರಿಗೆ ಅವಕಾಶವಿಲ್ಲ ಎಂದು ಸ್ಪಷ್ಟ ಪಡಿಸಿದರು.

# ಆಸ್ತಿ ಖರೀದಿಗೆ ಪೊಲೀಸರಿಗೆ ಪರ್ಮಿಟ್ ಕಡ್ಡಾಯ




ಬೆಂಗಳೂರು: ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎ, ಬಿ ಮತ್ತು ಸಿ ದರ್ಜೆಯ (ಐಪಿಎಸ್ ಅಧಿಕಾರಿಗಳನ್ನು ಹೊರತುಪಡಿಸಿ) ಅಧಿಕಾರಿಗಳು ಹಾಗೂ ಸಿಬ್ಬಂದಿ ಸ್ಥಿರ-ಚರಾಸ್ತಿಯನ್ನು ಖರೀದಿಸಲು, ಮಾರಾಟ ಮಾಡಲು ಹಾಗೂ ಉಡ-ುಗೊರೆ ರೂಪದಲ್ಲಿ ಪಡೆಯುವ ಮುನ್ನ ಪ್ರಾಧಿಕಾರದಿಂದ ಅನುಮತಿ ಪಡೆಯುವ ನಿಯಮವನ್ನು ಕಡ್ಡಾಯವಾಗಿ ಪಾಲಿಸಲು ಸೂಚಿಸಿರುವ ರಾಜ್ಯ ಪೊಲೀಸ್ ಇಲಾಖೆ, ಆಸ್ತಿ ವ್ಯವಹಾರಕ್ಕೆ ಸಂಬಂಧಪಟ್ಟಂತೆ ಸ್ಪಷ್ಟ ದಾಖಲಾತಿಗಳನ್ನು ಸಲ್ಲಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) ನಿಯಮಗಳು 2021ರ ನಿಯಮ 24 ಅನ್ವಯ ಚರಾಸ್ತಿ, ಸ್ಥಿರಾಸ್ತಿ ಮತ್ತು ಬೆಲೆಬಾಳುವ ಸ್ವತ್ತು ಉಪ ನಿಯಮ (3) ಪ್ರಕಾರ ಸರ್ಕಾರಿ ನೌಕರ ಅಥವಾ ಆತನ ಕುಟುಂಬ ಸದಸ್ಯರ ಹೆಸರಲ್ಲಿ ಆಸ್ತಿ ಖರೀದಿಸುವ ಮೊದಲೇ ಪ್ರಾಧಿಕಾರಕ್ಕೆ ತಿಳಿಸಬೇಕು. ಪ್ರಾಧಿಕಾರದ ಗಮನಕ್ಕಿಲ್ಲದೆ ಗುತ್ತಿಗೆ, ಅಡಮಾನ, ಖರೀದಿ, ಮಾರಾಟ, ಉಡುಗೊರೆ ಮೂಲಕ ಪಡೆಯಲು ಅವಕಾಶ ಇಲ್ಲ. ಒಂದು ವೇಳೆ ಪ್ರಾಧಿಕಾರಕ್ಕೆ ತಿಳಿಸದೆ ಇಂತಹ ವ್ಯವಹಾರ ಮಾಡಿದ್ದಲ್ಲಿ 2 ತಿಂಗಳ ಒಳಗಾಗಿ ಪೂರಕ ದಾಖಲಾತಿಗಳು ಹಾಗೂ ಸಮರ್ಥನೀಯ ಕಾರಣಗಳೊಂದಿಗೆ ಅರ್ಜಿ ಸಲ್ಲಿಸಿ ಅನುಮತಿ ಪಡೆಯಬೇಕೆಂದು ಸ್ಪಷ್ಟಪಡಿಸಿದೆ.

ಒಂದು ವೇಳೆ ನಿಯಮಿತ ಪ್ರಾಧಿಕಾರಿಗೆ ಮೊದಲೇ ತಿಳಿಸದೆ ಆಸ್ತಿ ಖರೀದಿ ಅಥವಾ ಮಾರಾಟ ಮಾಡಿದ್ದರೆ 2 ತಿಂಗಳ ಒಳಗಾಗಿಯೂ ವರದಿ ಮಾಡದಿದ್ದಲ್ಲಿ ಅಂತಹ ಅಧಿಕಾರಿ ಮತ್ತು ಸಿಬ್ಬಂದಿ ವಿರುದ್ಧ ಕೆಎಸ್ಸಿ (ನಡತೆ) ನಿಯಮಗಳನ್ನು ಉಲ್ಲಂಘನೆ ಆರೋಪದಡಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಡಿಜಿಪಿ (ಆಡಳಿತ) ಸೌಮೇಂದು ಮುಖರ್ಜಿ ಹೊರಡಿಸಿರುವ ಆದೇಶದಲ್ಲಿ ಎಚ್ಚರಿಕೆ ನೀಡಲಾಗಿದೆ.

ಮನೆ ಕಟ್ಟಲು ದಾಖಲೆಗಳೇನು? ಗೃಹ ನಿರ್ವಣಕ್ಕೆ ಇಚ್ಛಿಸಿರುವ ನಿವೇಶನ ಖರೀದಿಸಲು ಇಲಾಖಾ ಅನುಮತಿ ಪತ್ರ, ತಗಲುವ ವೆಚ್ಚದ ಬಗ್ಗೆ ಇಂಜಿನಿಯರ್ ಅವರಿಂದ ಪಡೆದ ಅಂದಾಜು ವೆಚ್ಚದ ಪಟ್ಟಿ, ಮನೆ ಕಟ್ಟುವ ವೆಚ್ಚವನ್ನು ಯಾವ ಮೂಲದಿಂದ ಭರಿಸಲಾಗುತ್ತದೆ ಎಂಬ ದಾಖಲೆ, ಖರೀದಿ, ಗಿಫ್ಟ್ ಪಡೆಯಲು ದಾಖಲೆಗಳು, ಆಸ್ತಿ ಮೌಲ್ಯ, ದರ ನಿಗದಿ ಪತ್ರ, ನೋಂದಣಿ ಶುಲ್ಕದ ವಿವರ ಹಾಗೂ ವಿಳಾಸ , ಮಾರಾಟಗಾರರಿಗೂ ಖರೀದಿದಾರರಿಗೂ ಸರ್ಕಾರಿ ವ್ಯವಹಾರ ಇಲ್ಲವೆಂದು ಖರೀದಿದಾರ/ಸರ್ಕಾರಿ ಅಧಿಕಾರಿ ನೀಡಿರುವ ದೃಢೀಕರಣ ಪತ್ರ, ಬ್ಯಾಂಕ್ ಸಾಲವಾಗಿದ್ದಲ್ಲಿ ಅದರ ಮೊತ್ತ, ಇಎಂಐ ವಿವರಗಳು, ಉಡುಗೊರೆ ಮೂಲಕ ಪಡೆಯಲು ಉದ್ದೇಶಿಸಿರುವ ಜಮೀನು ಸದ್ಯ ಯಾರ ಹೆಸರಿನಲ್ಲಿದೆ ಎಂಬ ವಿವರ, ಉಡುಗೊರೆ ನೀಡುತ್ತಿರುವವರ ವಿವರ, ಐಟಿಆರ್ ದಾಖಲೆ ನೀಡಬೇಕು.

## ವಿದ್ಯಾರ್ಥಿ ಜೀವನ ಸದ್ಬಳಕೆಯಾಗಲಿ



ಬೆಳಗಾವಿ: ವಿದ್ಯಾರ್ಥಿ ಜೀವನವೂ ನಮ್ಮ ಜೀವನದ ಪ್ರಮುಖ ಕಾಲಘಟ್ಟವಾಗಿದ್ದು, ಪ್ರತಿಯೊಬ್ಬರು ಈ ಘಳಿಗೆಯನ್ನು ಸದ್ಬಳಕೆ ಮಾಡಿಕೊಂಡು ಎಲ್ಲರಿಗೂ ಮಾದರಿಯಾಗುವಂತೆ ಜೀವನ ರೂಪಿಸಿಕೊಳ್ಳಬೇಕು ಎಂದು ಯುವ ಮುಖಂಡ ರಾಹುಲ್ ಜಾರಕಿಹೋಳಿ ಹೇಳಿದರು.

ನಗರದ ಬಿಮ್ಸ್‌ನಲ್ಲಿ ಗುರುವಾರ ಆಯೋಜಿಸಿದ್ದ ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳ ಸ್ವಾಗತ ಹಾಗೂ ಬಿಳ್ಕೋಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಶಿಕ್ಷಣವು ಸಮಾಜದ ಎಲ್ಲ ಕಟ್ಟಳೆಗಳನ್ನು ಮೀರಿದ್ದಾಗಿದೆ, ಶಿಕ್ಷಣ ಎನ್ನುವುದು ಹುಲಿಯ ಹಾಲಿನಂತೆ ಅದನ್ನು ಕುಡಿದವರು ಘರ್ಜಿಸಲೇಬೇಕು ಎನ್ನುವಂತೆ ವಿದ್ಯಾರ್ಥಿಗಳು ಶಿಕ್ಷಣದ ಮೂಲಕ ಜೀವನ ರೂಪಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಬಿಮ್ಸ್‌ನ ನಿರ್ದೇಶಕ ಡಾ.ಅಶೋಕಕುಮಾರ್ ಶೆಟ್ಟಿ, ವೈದ್ಯಕೀಯ ಅಧೀಕ್ಷಕ ಡಾ.ಈರಣ್ಣಪಲ್ಲೆದ, ಜಿಲ್ಲಾ ಶಸ್ತ್ರ ಚಿಕಿತ್ಸಕ ವಿಠ್ಠಲ್ ಶಿಂಧೆ, ಅರೆವೈದ್ಯಕೀಯ ಸಂಯೋಜಕ ಡಾ.ಎಂ.ಎಸ್. ಶೇಖನ್ನವರ ಇದ್ದರು.

# ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಸಾರಿಗೆ ನೌಕರರಿಂದ ಮನವಿ

ಬೆಳಗಾವಿ: ಸಾರಿಗೆ ನೌಕರರ ವೇತನ ಪರಿಷ್ಕರಣೆ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ವಾಯವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ವತಿಯಿಂದ ಬೆಳಗಾವಿ ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾ-ರಿಗಳ ಮೂಲಕ ಹುಬ್ಬಳ್ಳಿಯ ವಾ.ಕ.ರ.ಸಾ.ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ-ರಿಗೆ ಮನವಿ ಸಲ್ಲಿಸಲಾಯಿತು.

ಇಲ್ಲಿನ ಸಾರಿಗೆ ನೌಕರರು ಬೆಳಗಾವಿ ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾ-ರಿಗಳ ಕಚೇರಿವರೆಗೂ ತೆರಳಿ ಗುರುವಾರ ಮನವಿ ಸಲ್ಲಿಸಿದರು.

ಬೆಲೆ ಏರಿಕೆಯಿಂದ ತತ್ತರಿಸಿರುವ ರಾಜ್ಯದ ಜನತೆಗೆ ಸರ್ಕಾರ ಐತಿಹಾಸಿಕ 5 ಗ್ಯಾರೆಂಟಿಗಳಿಂದ ನೆಮ್ಮದಿಯಿಂದ ಜೀವನ ಸಾಗಸುತ್ತಿದ್ದಾರೆ. ಸರ್ಕಾರ ನಿರ್ಧಾರಕ್ಕೆ ಅಭಿನಂದನೆ ಸಲ್ಲಿಸುತ್ತೇವೆ.

5 ಗ್ಯಾರೆಂಟಿಗಳ ಪೈಕಿ "ಶಕ್ತಿ ಯೋಜನೆ" ಯನ್ನು ಪ್ರಪ್ರಥಮವಾಗಿ ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ಮೂಲಕ ಅನುಷ್ಠಾನಗೊಳಿಸಿರುವುದು ಅತ್ಯಂತ



ಹೆಮ್ಮೆಯ ವಿಷಯವಾಗಿದೆ.

ಆದರೆ, ಡಿಸೇಲ್, ಆಯಿಲ್, ಟಾಯರ್ ಹಾಗೂ ಇತರೆ ಬಿಡಿಭಾಗಗಳ ಬೆಲೆ ಏರಿಕೆಯಿಂದಾಗಿ ರಾಜ್ಯದ ನಾಲ್ಕು ಸಾರಿಗೆ ನಿಗಮಗಳು ಆರ್ಥಿಕ ಸಂಕಷ್ಟದಲ್ಲಿವೆ. ಹೀಗಾಗಿ ಸಾರಿಗೆ ನಿಗಮಗಳನ್ನು ಆರ್ಥಿಕವಾಗಿ ಬಲ ಪಡಿಸಲು ಹಾಗೂ ರಾಜ್ಯದ ಜನತೆಗೆ ಇನ್ನೂ ಉತ್ತಮವಾದ ಸಾರಿಗೆ ಸೇವೆ ನೀಡಲು ನೌಕರರ ಬೇಡಿಕೆಗೆ ಸರ್ಕಾರ ಶೀಘ್ರವೇ ಸ್ಪಂಧಿಸಬೇಕು ಎಂದು ಮನವಿ ಮೂಲಕ ಸರ್ಕಾರಕ್ಕೆ ಒತ್ತಾಯಿಸಿದರು.

ಪ್ರತಿ ಮೂರು ವರ್ಷಗಳಿಗೊಮ್ಮೆ ಸಾರಿಗೆ ನೌಕರರಿಗೆ ವೇತನವನ್ನು ಪರಿಷ್ಕರಣೆ ಮಾಡಲಾಗುತ್ತದೆ.

ಈ ಸಂಬಂಧ 2020ರ ಜನವರಿಯಿಂದ ವೇತನ ಪರಿಷ್ಕರಣೆ ಮಾಡಬೇಕಾಗಿದ್ದು, ಇದುವರೆಗೆ ಮಾಡಿಲ್ಲ ಎಂದು ಮನವಿಯಲ್ಲಿ ತಿಳಿಸಿದರು.

ರಾಜ್ಯ ಸರ್ಕಾರಿ ನೌಕರರಿಗೆ ಏಳನೇ ವೇತನ ಆಯೋಗ ಜಾರಿಗೊಳಿಸುವ ಬಗ್ಗೆ ಪ್ರಕ್ರಿಯೆ ಆರಂಭಗೊಂಡಿದೆ. ಸರ್ಕಾರಿ ನೌಕರರ ಮೂಲ ವೇತನದಲ್ಲಿ ಹಾಗೂ ಸಾರಿಗೆ ಸಂಸ್ಥೆ ನೌಕರರ ಮೂಲ ವೇತನದಲ್ಲಿ ಬಹಳ ವ್ಯತ್ಯಾಸವಿದೆ. ಇದರಿಂದಾಗಿ ನೌಕರರು ತಾರತಮ್ಯ ಅನುಭವಿಸುವಂತಾಗಿದೆ. ಅಗತ್ಯ ಸೇವೆಯ ಅಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಂಸ್ಥೆಯ ನೌಕರರಿಗೆ ಸರ್ಕಾರಿ ನೌಕರರ ವೇತನಕ್ಕೆ ಸರಿಸಮಾನವಾಗಿ ವೇತನವನ್ನು ಪರಿಷ್ಕರಿಸುವಂತೆ ಆಗ್ರಹಿಸಿದರು.

ಸರ್ಕಾರ ಶೀಘ್ರವೇ ಶಕ್ತಿ ಯೋಜನೆ ಸಂಪೂರ್ಣ ಅನುದಾನ ಕೂಡಲೇ ಸಾರಿಗೆ ನಿಗಮಗಳಿಗೆ ಪಾವತಿಸಬೇಕು. 2020 ರಿಂದ 2023 ರ ಅವಧಿಯಲ್ಲಿ ನಿವೃತ್ತರಾದ ನೌಕರರಿಗೆ ವೇತನ ಪರಿಷ್ಕರಣೆ ಅಳವಡಿಸಿ ಕೂಡಲೇ ನಿವೃತ್ತಿ ಸೌಲಭ್ಯಗಳ ಬಾಕಿ ಹಣ ಪಾವತಿಸಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಗೌರವಾಧ್ಯಕ್ಷರು ನಾಗೇಶ ಸಾತೇರಿ, ಪ್ರಧಾನ ಕಾರ್ಯದರ್ಶಿ ಸುರೇಶ ವ್ಹಿ ಯರಡ್ಡಿ, ಪ್ರಧಾನಕಾರ್ಯದರ್ಶಿ ಗೋಪಾಲ ಲಮಾಣಿ, ಸಾರಿಗೆ ಸಿಬ್ಬಂದಿಗಳು ಹಾಗೂ ಕರಾರಸಾಸಂಸ್ಥೆ/ಪಪಂ ಹಾಗೂ ಆಂಡ್ ವರ್ಕರ್ಸ ಯುನಿಯನ್ ನೌಕರರ ಸಂಘ, ಗಿರೀಶ ಕಾಂಬಳೆ, ಪ್ರಕಾಶ ಸಿದ್ನಾಳ, ಉಮೇಶ, ಈರಣ್ಣಾ ಸಂಬರಗಿ, ನಾಗರಾಜ ಕಾಡೇಶನವರ , ಶಿವಪ್ಪಾ ದಳವಾಯಿ ಹಾಗೂ ಇತರರು ಇದ್ದರು.

# ಕೇಂದ್ರ ಸಚಿವ ನಿತಿನ್ ಗಡ್ಕರಿಗೆ ಡಾ.ಪ್ರಭಾಕರ ಕೋರೆ ಸತ್ಕಾರ

ಬೆಳಗಾವಿ: ಕಾಗವಾಡ ತಾಲೂಕಿನ ಜನತೆಯ ಬಹುದಿನಗಳ ಬೇಡಿಕೆಯಾಗಿದ್ದ ಮುರಗುಂಡಿ (ಕಾಗವಾಡ) ದಿಂದ ಗೋಟೂರ ವರೆಗಿನ ಚತುಸ್ಪಥ ರಸ್ತೆಯ ಕಾಮಗಾರಿಗೆ 2615 ಕೋಟಿ ರೂಪಾಯಿಗಳನ್ನು ಕೇಂದ್ರದಿಂದ ಮಂಜೂರು ಮಾಡಿ ಅದರಂತೆ ಶಿರಗುಪ್ಪಿಯಿಂದ ಅಂಕಲಿಯ ಕೃಷ್ಣಾ ಮೇಲ್ಸೇತುವೆ ಕಾಮಗಾ-ರಿಗೂ ಅದೇ ಮಂಜೂರಾತಿಯಲ್ಲಿ 887 ಕೋಟಿ ಹಣವನ್ನು ಮೀಸಲಿಟ್ಟು ಚಾಲನೆ ನೀಡಿದಕೇಂದ್ರ ಸಾರಿಗೆ ಸಚಿವ ನಿತಿನ್‌ಗಡ್ಕರಿ ಅವರಿಗೆ ಸಮಸ್ತ ಚಿಕ್ಕೋಡಿ ಕಾಗವಾಡ ಭಾಗದ ಜನತೆಯ ಪರಿವಾಗಿ ಕೆಎಲ್‌ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆಯವರು ಬೆಳಗಾವಿಗೆ ಆಗಮಿಸಿದ್ದ ಸಂದರ್ಭದಲ್ಲಿ ಸನ್ಮಾನಿಸಿ ಅಭಿನಂದಿಸಿದರು.



ಅಂತೆಯೆ ಬೆಳಗಾವಿ ನಗರದರಿಂಗ್ ರಸ್ತೆ ಕಾಮಗಾರಿಯು ಬಹುವರ್ಷಗಳಿಂದ ನೆನಗುದಿಗೆ ಬಿದ್ದಿತ್ತು ಅದಕ್ಕೆ 1622 ಕೋಟಿ ರೂ. ಗಳನ್ನು ಕೇಂದ್ರ ಸಚಿವ ನಿತಿನ್‌ಗಡ್ಕರಿ ಅವರು ಮಂಜೂರು ಮಾಡಿದ್ದಾರೆ ಎಂದು ಸ್ಮರಿಸಿದ ಡಾ. ಕೋರೆಯವರು, ಕಾಗವಾಡದಿಂದ ಮೀರಜ್ (ಮಹಾರಾಷ್ಟ್ರ) ಸಂಪರ್ಕಕಲ್ಪಿಸುವ ಸುಮಾರು 17 ಕಿ.ಮೀ. ರಸ್ತೆಯನ್ನು ಉನ್ನತ ದರ್ಜೆಗೆಏರಿಸಬೇಕು ಈ ರಸ್ತೆಯು ಮುಂದೆ ಸೊಲ್ಲಾಪುರ-ಲಾತೂರ-ನಾಗಪೂರಕ್ಕೆ ಹೋಗಲು ಎರಡು ರಾಜ್ಯಗಳಿಗೆ ಅನುಕೂಲವಾಗುತ್ತದೆ ಎಂದು ವಿನಂತಿಸಿಕೊಂಡಾಗ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿ ಮುಂಬರುವ ದಿನಗಳಲ್ಲಿ ಶೀಘ್ರವಾಗಿ ಈ ಯೋಜನೆಗೆ ಚಾಲನೆ ನೀಡಲಾಗುವುದೆಂದು ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯಸಭಾ ಸದಸ್ಯ ಈರಣ್ಣಾ ಕಡಾಡಿ, ಶಾಸಕ ಅಭಯ ಪಾಟೀಲ, ಮಾಜಿ ವಿಧಾನ ಪರಿಷತ್ ಸದಸ್ಯರಾದ ಮಹಾಂತೇಶ ಕವಟಗಿಮಠ ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089